ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ
Cell : 6360866626, 9036887793

KANNADA DAILY NEWS PAPER
ಕನ್ನಡ ದಿನಪತ್ರಿಕೆ

DAIRYADA DAARI
RNI NO: KNKAN/25/A2795

EMAIL : dairyadadaari@gmail.com
ಸಂಪುಟ: 01 ಸಂಚಿಕೆ: 216
ಬೆಲೆ ರೂ : 2.00
ರಾಯಚೂರು
ಪುಟ: 4
ಗುರುವಾರ: 06–08–2026

# ವಿಮೆ ಇಲ್ಲಾಂದ್ರೆ ಇಂಧನವಿಲ್ಲ




## ಸುಪ್ರೀಂ ಕೋರ್ಟ್ ಮಹತ್ವದ ಹೆಜ್ಜೆ

ನವದೆಹಲಿ,ಆ.5– ರಸ್ತೆ ಸುರಕ್ಷತೆ ಹೆಚ್ಚಿಸಲು ಮತ್ತು ವಿಮೆ ರಹಿತ ವಾಹನಗಳ ಚಾಲನೆಗೆ ಕಡಿವಾಣ ಹಾಕಲು ಸುಪ್ರೀಂ ಕೋರ್ಟ್ ಮಹತ್ವದ ಹೆಜ್ಜೆಯನ್ನಿಟ್ಟಿದೆ. ವಾಹನಕ್ಕೆ ಸಿಂಧುತ್ವ ಹೊಂದಿರುವ ವಿಮೆ ಇಲ್ಲದಿದ್ದರೆ ಪೆಟ್ರೋಲ್ ಪಂಪ್‌ಗಳಲ್ಲಿ ಇಂಧನ ವಿತರಿಸದಂತೆ ತಡೆಯುವ ಪ್ರಾಯೋಗಿಕ ಯೋಜನೆಯನ್ನು ರೂಪಿಸಲು ಭಾರತೀಯ ವಿಮಾ ನಿಯಂತ್ರಣ ಮತ್ತು ಅಭಿವೃದ್ಧಿ ಪ್ರಾಧಿಕಾರ ಹಾಗೂ ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವಾಲಯಕ್ಕೆ ಸುಪ್ರೀಂ ಕೋರ್ಟ್ ನಿರ್ದೇಶನ ನೀಡಿದೆ.

ಈ ಯೋಜನೆಯು ಜಾರಿಗೆ ಬಂದರೆ, ಪೆಟ್ರೋಲ್ ಬಂಕ್‌ಗಳಲ್ಲಿ ಇಂಧನ ತುಂಬಿಸುವ ಮುನ್ನವೇ ವಾಹನದ ವಿಮೆ ಪರಿಶೀಲಿಸಲಾಗುತ್ತದೆ. ವಿಮೆ ನವೀಕರಣಗೊಳ್ಳದಿದ್ದರೆ ಪೆಟ್ರೋಲ್ ಅಥವಾ ಡೀಸೆಲ್ ನಿರಾಕರಿಸುವ ಸಾಧ್ಯತೆಯಿದೆ.
ಹೆದ್ದಾರಿಗಳಲ್ಲಿರುವ ಎಎನ್‌ಪಿಆರ್ ಕ್ಯಾಮೆರಾಗಳನ್ನು ವಾಹನ ಮತ್ತು ವಿಮೆ ಡೇಟಾಬೇಸ್‌ಗೆ ಲಿಂಕ್ ಮಾಡಲಾಗುತ್ತದೆ. ಇದರಿಂದ ವಿಮೆ ಇಲ್ಲದ ವಾಹನಗಳನ್ನು ತಕ್ಷಣ ಪತ್ತೆಹಚ್ಚಿ ಇ–ಚಲನ್ ರವಾನಿಸಲಾಗುತ್ತದೆ.
ಪೊಲೀಸರಿಗೆ ವಿಶೇಷ ಮೊಬೈಲ್ ಆಪ್ ಅಥವಾ ತಂತ್ರಜ್ಞಾನ ಆಧಾರಿತ ಸಾಧನಗಳನ್ನು ನೀಡಲಾಗುವುದು. ಸ್ಥಳದಲ್ಲೇ ವಾಹನದ ವಿಮೆ ಸ್ಥಿತಿಗತಿಯನ್ನು ಭೌತಿಕ ದಾಖಲೆಗಳಿಲ್ಲದೆ ಪರಿಶೀಲಿಸಲು ಇದು ನೆರವಾಗಲಿದೆ.




ಕಡ್ಡಾಯ ಥರ್ಡ್ ಪಾರ್ಟಿ ವಿಮೆ ಅವಧಿಯನ್ನು 3 ವರ್ಷಗಳಿಂದ 4 ವರ್ಷಗಳಿಗೆ ಹೆಚ್ಚಿಸಲು ಪ್ರಸ್ತಾಪ. ವಿಮೆ ಅವಧಿಯನ್ನು 5 ವರ್ಷಗಳಿಂದ 6 ವರ್ಷಗಳಿಗೆ ಏರಿಸಿವುದನ್ನು ಸುಪ್ರೀಂ ಪ್ರಸ್ತಾಪಿಸಿದೆ.
ಪ್ರಸ್ತುತ ಇದು ಪ್ರಾಯೋಗಿಕ ಹಂತದ ಪ್ರಸ್ತಾಪವಾಗಿದ್ದು, ಪೆಟ್ರೋಲ್ ಪಂಪ್‌ಗಳ ದೈನಂದಿನ ಕಾರ್ಯನಿರ್ವಹಣೆಗೆ ತೊಂದರೆಯಾಗದಂತೆ ಇದನ್ನು ಹೇಗೆ ಅನುಷ್ಠಾನಗೊಳಿಸಬಹುದು ಎಂಬುದರ ಕುರಿತು ಸಂಬಂಧಪಟ್ಟ ಅಧಿಕಾರಿಗಳು ಪರಿಶೀಲನೆ ನಡೆಸಲಿದ್ದಾರೆ. 2ನೇಪುಟಕ್ಕೆ

### ದಂಡ ಮತ್ತಷ್ಟು ಕಠಿಣ?

ಮಾನ್ಯ ಥರ್ಡ್ ಪಾರ್ಟಿ ವಿಮೆ ಇಲ್ಲದೆ ವಾಹನ ಚಲಾಯಿಸುವವರ ವಿರುದ್ಧ ಮೋಟಾರು ವಾಹನ ಕಾಯ್ದೆಯಡಿ ಕಠಿಣ ಕ್ರಮ ಕೈಗೊಳ್ಳುವ ಅಗತ್ಯವನ್ನು ಒತ್ತಿ ಹೇಳಲಾಗಿದೆ. ಪ್ರಸ್ತಾವಿತ ದಂಡವನ್ನು 5,000 ಅಥವಾ ವಾರ್ಷಿಕ ವಿಮಾ ಪ್ರೀಮಿಯಂನ ಮೂರು ಪಟ್ಟು ವಿಧಿಸುವ ಕುರಿತು ಚರ್ಚೆ ನಡೆದಿದೆ.

## ಡೆಂಗ್ಯೂ ಜ್ವರ ನಿಯಂತ್ರಣ ನಮ್ಮೆಲ್ಲರ ಜವಬ್ದಾರಿ: ಗಂಗೋತ್ರಿ



ಧೈರ್ಯದ ದಾರಿ

**ರಾಯಚೂರು ಆಗಸ್ಟ್ 05:** ಮನೆಯ ಒಳಗಡ ಪರಿಕರಗಳು ಮುಚ್ಚಿ ಇಡಲು ಹಾಗೂ ವಾರಕ್ಕೊಮ್ಮೆ ಎಲ್ಲಾ ನೀರಿನ ಪರಿಕರಗಳನ್ನು ತೊಳೆದು ಒಣಗಿಸಿ ನೀರು ತುಂಬಬೇಕು ಮನೆಯ ಹೊರಗಡೆ ನೀರು ನಿಲ್ಲದಂತೆ ಎಚ್ಚರ ವಹಿಸಬೇಕೆಂದು ಕಲಬುರ್ಗಿ ವಿಭಾಗೀಯ ಕೀಟ ಶಾಸ್ತ್ರ ತಜ್ಞರಾದ ಗಂಗೋತ್ರಿ ಅವರು ಹೇಳಿದರು.
ಆಗಸ್ಟ್ 05ರ ಬುಧವಾರ ದಂದು ರಾಯಚೂರಿನ ಜಹೀರಬಾದ್ ಏರಿಯಾದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ತಾಲೂಕು ಆರೋಗ್ಯ ಅಧಿಕಾರಗಳ ಕಾರ್ಯಾಲಯ ವತಿಯಿಂದ ನಡೆದ ಲಾರ್ವ ಸಮೀಕ್ಷೆಯ ಮೇಲ್ವಿಚಾರಣೆ ವೀಕ್ಷಣೆ ಮಾಡಿ, ಅವರು ಮಾತನಾಡಿದರು.
ಈಡೀಸ್ ಸೊಳ್ಳೆಗಳಿಂದ ಹರಡುವ ರೋಗಗಳಾದ ಡೆಂಗ್ಯೂ ಚಿಕನ್ ಗುನ್ಯಾದಂತ ರೋಗಗಳು ಬರುವ ಸಾದ್ಯತೆ ಇರುತ್ತದೆ. ಮನೆಯ ಕಂಪೌಂಡ ಒಳಗಡೆ ತ್ಯಾಜ್ಯ ವಸ್ತುಗಳ ವಿಲೇವಾರಿ ಮಾಡಿಸಬೇಕು, ಟೆಂಗಿನ ಚಿಪ್ಪು , ತತ್ತಿ, ಮಕ್ಕಳ ಆಟ ಆಡುವ ಮುರಿದ ಸಾಮಾನು .ಟೈರು ವಸ್ತುಗಳಲ್ಲಿ ಮಳೆನೀರು ನಿಲ್ಲದಂತೆ ನೋಡಿಕೊಳ್ಳಲು ತಿಳಿಸಿದರು. ಡೆಂಗ್ಯೂ ನಿಯಂತ್ರಣ ನಮ್ಮೆಲ್ಲರ ಜವಬ್ದಾರಿ ನೀರು ನಿಲ್ಲದಂತೆ ಎಚ್ಚರ ವಹಿಸಿ ಎಂದು ತಿಳಿಸಿದರು.
ಈ ವೇಳೆ ಜಿಲ್ಲಾ ಕೀಟ ಶಾಸ್ತ್ರಜ್ಞರಾದ ನಂದಿನಿ,ವೈದ್ಯಾಧಿಕಾರಿ ಡಾ.ಶ್ವೇತಾಂಬರಿ ಅವರು ಮನೆ ಮನೆ ಭೇಟಿ ಮಾಡುವ ತಂಡದ ಮೇಲೆ ಮೇಲ್ವಿಚಾರಣೆ ಮಾಡಿ ಕುಟುಂಬದ ಸದಸ್ಯರಿಗೆ ಲಾರ್ವ ಕುರಿತು ಆರೋಗ್ಯ ಶಿಕ್ಷಣವನ್ನು ನೀಡಿದರು.
ಇದೇ ಸಂದರ್ಭದಲ್ಲಿ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಸರೋಜ, ಎಮ್.ಟಿ.ಎಸ್.ಸಂಧ್ಯಾ, ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿ ಶಾರದಾ, ಆರೋಗ್ಯ ನಿರೀಕ್ಷಣಾಧಿಕಾರಿ ಶೃತಿ, ಸುಶೀಲಾ, ಆಶಾ ಕಾರ್ಯಕರ್ತೆಯರು.

## ಸಿರವಾರ ಪಟ್ಟಣದ ಮುಖ್ಯರಸ್ತೆ ಸುಧಾರಣೆಗೆ ತಾತ್ಕಲಿಕ ಕ್ರಮ: ಸಾರ್ವಜನಿಕರ ಸಂಚಾರಕ್ಕೆ ಅನುಕೂಲ




ಧೈರ್ಯದ ದಾರಿ

**ಸಿರವಾರ:**ಮಳೆಯಿಂದಾಗಿ ಹದಗೆಟ್ಟು ಹೋಗಿದ್ದ ಸಿರವಾರ ಪಟ್ಟಣದ ಮುಖ್ಯರಸ್ತೆಯಲ್ಲಿ, ಸಾರ್ವಜನಿಕರು ಮತ್ತು ವಾಹನ ಸವಾರರು ಓಡಾಡಲು ಅನುಕೂಲವಾಗುವಂತೆ ತಾತ್ಕಲಿಕವಾಗಿ ರಸ್ತೆಗೆ ಮುರಂ ಹಾಕಿ ದುರಸ್ತಿಪಡಿಸಲಾಗಿದೆ ಎಂದು ಪಟ್ಟಣ ಪಂಚಾಯತ್ ಅಧ್ಯಕ್ಷರಾದ ಹಾಜಿ ಚೌದ್ರಿ ತಿಳಿಸಿದ್ದಾರೆ.
ಅತಿಮಳೆಯ ಕಾರಣದಿಂದ ಪಟ್ಟಣದ ಮುಖ್ಯ ರಸ್ತೆಯಲ್ಲಿ ದೊಡ್ಡ ಗುಂಡಿಗಳು ಬಿದ್ದು ಸಾರ್ವಜನಿಕರು ಹಾಗೂ ಶಾಲಾ ಮಕ್ಕಳು ಸಂಚರಿಸಲು ತೀವ್ರ ತೊಂದರೆಯಾಗಿತ್ತು. ಜನರ ಹಿತದೃಷ್ಟಿಯಿಂದ ಎಚ್ಚೆತ್ತ ಪಟ್ಟಣ ಪಂಚಾಯತ್ ಆಡಳಿತ ಮಂಡಳಿಯು, ಸದ್ಯಕ್ಕಿರುವ ಸಮಸ್ಯೆಯನ್ನು ನಿವಾರಿಸಲು ರಸ್ತೆಗೆ ಮುರಂ ಸುರಿಸಿ ತಾತ್ಕಲಿಕವಾಗಿ ಸುಗಮ ಸಂಚಾರಕ್ಕೆ ವ್ಯವಸ್ಥೆ ಕಲ್ಪಿಸಿದೆ. ಶೀಘ್ರದಲ್ಲೇ ರಸ್ತೆಗೆ ಶಾಶ್ವತ ಡಾಂಬರೀಕರಣ ಕಾಮಗಾರಿಯುನ್ನು ಕೈಗೊಳ್ಳಲಾಗುವುದು ಎಂದು ಅವರು ಈ ಸಂದರ್ಭದಲ್ಲಿ ಮಾಹಿತಿ ನೀಡಿದರು.

## ಜೋಳ ನೀಡಿದ ರೈತರ ಖಾತೆಗೆ ಹಣವನ್ನು ಜಮಾ ಮಾಡಿ: ಅಮೀನ ಪಾಷ ದಿದ್ದಿಗಿ

ಧೈರ್ಯದ ದಾರಿ



**ಮಾನ್ವಿ:** ಪಟ್ಟಣದ ತಹಶೀಲ್ದಾರ್ ಕಚೇರಿಯಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಮಾನ್ವಿ ಮತ್ತು ಸಿರವಾರ ತಾಲೂಕ ಸಮಿತಿ ವತಿಯಿಂದ ಬರಕೋಲ ಚಳುವಳಿ ಹಮ್ಮಿಕೊಂಡು ಮುಖ್ಯ ಮಂತ್ರಿಗಳಿಗೆ ಉಪ ತಹಶೀಲ್ದಾರ್ ವಿರುಪಣ್ಣ ರವರ ಮೂಲಕ ಮನವಿ ಸಲ್ಲಿಸಿ ಹಸಿರು ಸೇನೆ ರಾಜ್ಯ ಪ್ರಧಾನ ಕಾರ್ಯದರ್ಶಿ ಅಮೀನ ಪಾಷ ದಿದ್ದಿಗಿ ಮಾತನಾಡಿ ಮಾನವಿ ತಾಲೂಕಿನ ರೈತರು ಜೋಳವನ್ನು ಖರೀದಿ ಕೇಂದ್ರಗಳಿಗೆ ಮಾರಾಟ ಮಾಡಿ 4 ತಿಂಗಳು ಕಳೆದರು ಕೂಡ ರೈತರ ಖಾತೆಗಳಿಗೆ ಇನ್ನೂ ಹಣ ಜಮಾ ಆಗಿಲ್ಲ ಅದ್ದರಿಂದ ಕೂಡಲೇ ರೈತರ ಖಾತೆಗೆ ಹಣವನ್ನು ಜಮಾ ಮಾಡಬೇಕು ತಾಲೂಕಿನಲ್ಲಿ ಸಕಾಲಕ್ಕೆ ಮುಂಗಾರು ಮಳೆಯಾಗದೆ ರೈತರು ಬಿತ್ತನೆ ಮಾಡಿದ ಹತ್ತಿ, ತೊಗರಿ, ಭತ್ತ, ಸೂರ್ಯಪಾನ, ಸಜ್ಜೆ ಸೇರಿದಂತೆ ಇತರೆ ಎಲ್ಲಾ ಬೆಳೆಗಳು ಹಾಳಗಿದು ಕೂಡಲೇ ರೈತರಿಗೆ ಎಕರೆಗೆ 40 ಸಾವಿರ ಬೆಳೆನಷ್ಟ ಪರಿಹಾರ ನೀಡಬೇಕು. ಹಾಗೂ ರೈತರ ರಾಷ್ಟ್ರೀಕೃತ ಮತ್ತು ಸಹಕಾರಿ ಬ್ಯಾಂಕುಗಳಲ್ಲಿರುವ ಸಾಲವನ್ನು ಮನ್ನಾ ಮಾಡಬೇಕು. ಫಸಲ್ ಭೀಮಾ ಯೋಜನೆ ಅಡಿಯಲ್ಲಿ ವಿಮಾ ಪಾವತಿಸಿದ ಎಲ್ಲಾ ರೈತರ ಖಾತೆಗೆ ವಿಮೆ ಪರಿಹಾರ ಜಮಾ ಮಾಡಬೇಕು. ತುಂಗಭದ್ರಾ ಜಲಾಶಯದಲ್ಲಿ ಉತ್ತಮ ಒಳಹರಿವು ಇರುವುದರಿಂದ ಕೂಡಲೇ ತುಂಗಭದ್ರ ಜಲಾಶಯದಿಂದ ಕಾಲುವೆಗಳಿಗೆ ಹಾಗೂ ನದಿಗೆ ನೀರು ಹರಿಸುವ ಮೂಲಕ ರೈತರ ಬೆಳೆಗಳಿಗೆ 2ನೇಪುಟಕ್ಕೆ

## ರೈತರು ಹಾಗೂ ಬಡವರ ಏಳಿಗೆಗೆ ಸಹಕಾರಿ ಕ್ಷೇತ್ರ ವರದಾನ: ಹನುಮೇಶ ಜೇನೂರು

ಧೈರ್ಯದ ದಾರಿ



**ಮಾನ್ವಿ –:** ತಾಲೂಕಿನ ಪೋತ್ನಾಳ್ ಗ್ರಾಮದ ನವಸ್ಫೂರ್ತಿ ಸೌಹಾರ್ದ ಸಹಕಾರಿಯು ಕಾರ್ಯಾಲಯುದಲ್ಲಿ ಸಂಘದ 6ನೇ ಸರ್ವಸದಸ್ಯರ ವಾರ್ಷಿಕ ಸಾಮಾನ್ಯ ಸಭೆಯು ರವಿವಾರ ಯಶಸ್ವಿಯಾಗಿ ಜರುಗಿತು.

ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಸಹಕಾರಿಯ ಅಧ್ಯಕ್ಷರಾದ ಹನುಮೇಶ ಜೇನೂರು ಅವರು, ಸಂಸ್ಥೆಯು ಕಳೆದ ಆರ್ಥಿಕ ವರ್ಷದಲ್ಲಿ ರೂ.9 ಕೋಟಿಗೂ ಅಧಿಕ ವ್ಯವಹಾರ ನಡೆಸಿದೆ ಎಂದು ತಿಳಿಸಿದರು. ಆಡಳಿತ ಮಂಡಳಿ ಹಾಗೂ ಸಿಬ್ಬಂದಿಗಳ ಆ ಕಾರ್ಯದಕ್ಷತೆ ಮತ್ತು ಸದಸ್ಯರ ನಂಬಿಕೆಯಿಂದ ಸಂಸ್ಥೆ ವೇಗವಾಗಿ ಬೆಳೆಯುತ್ತಿದ್ದು, ಪ್ರಸ್ತುತ ಆರ್ಥಿಕ ವರ್ಷದಲ್ಲಿ ರೂ.37 ಲಕ್ಷ 2ನೇ ಪುಟಕ್ಕೆ

## ಅರಸು ಜನ್ಮ ದಿನಾಚರಣೆಗೆ ಅಗತ್ಯ ಸಿದ್ಧತೆಗೆ ಎಡಿಸಿ ಶಿವಾನಂದ ಸೂಚನೆ

ಧೈರ್ಯದ ದಾರಿ



**ರಾಯಚೂರು ಆಗಸ್ಟ್ 05:** ಮಾಜಿ ಮುಖ್ಯಮಂತ್ರಿ ಡಿ.ದೇವರಾಜ ಅರಸು ಅವರ 111ನೇ ಜನ್ಮದಿನಾಚರಣೆಯನ್ನು ಅಚ್ಚುಕಟ್ಟಾಗಿ ಆಚರಿಸಲು ಅಗತ್ಯ ಸಿದ್ಧತೆ ಮಾಡಿಕೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.
ಆಗಸ್ಟ್ 05ರ ಬುಧವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ನಡೆದ ಮಾಜಿ ಮುಖ್ಯಮಂತ್ರಿ ದಿವಂಗತ ಡಿ.ದೇವರಾಜ ಅರಸು ರವರ 111ನೇ ಜನ್ಮದಿನಾಚರಣೆಗೆ ಸಂಬಂಧಿಸಿದಂತೆ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.
ಅರಸು ಅವರ ಜನ್ಮದಿನಾಚರಣೆಯ ಅಂಗವಾಗಿ ಅವರ ಜೀವನ ಸಾಧನೆಗಳ ಕುರಿತು ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸಲು ವಿವಿಧ ಶಾಲಾ–ಕಾಲೇಜುಗಳಲ್ಲಿ ಭಾಷಣ, ಪ್ರಬಂಧ ಸೇರಿದಂತೆ ಇತರೆ ವಿವಿಧ ಸ್ಪರ್ಧೆ ಆಯೋಜಿಸಬೇಕು ಎಂದು ಅಪರ ಜಿಲ್ಲಾಧಿಕಾರಿಗಳು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.
ಕಾರ್ಯಕ್ರಮವನ್ನು ಶಿಷ್ಟಾಚಾರದ ಅನ್ವಯ ಆಯೋಜನೆ ಮಾಡಬೇಕು. ಆಮಂತ್ರಣ ಪತ್ರಿಕೆಗಳನ್ನು ಮುದ್ರಿಸಿ ಗಣ್ಯರಿಗೆ ಮುಂಚಿತವಾಗಿ ತಲುಪಿಸಬೇಕು. ಆಗಸ್ಟ್ 20ರ ಬೆಳಿಗ್ಗೆ 9ಗಂಟೆಗೆ ರಾಯಚೂರಿನ ಮಹಿಳಾ ಸಮಾಜದಿಂದ ಜಿಲ್ಲಾ ರಂಗಮಂದಿರದವರೆಗೆ ಡಿ.ದೇವರಾಜು ಅರಸು ಅವರ ಭಾವಚಿತ್ರದ ಮೆರವಣಿಗೆ ನಡೆಸಲು ಸಿದ್ಧತೆ ಮಾಡಿಕೊಳ್ಳಬೇಕು. ಬೆಳಿಗ್ಗೆ 11ಕ್ಕೆ ರಂಗಮಂದಿರದಲ್ಲಿ ವೇದಿಕೆ ಕಾರ್ಯಕ್ರಮವನ್ನು ನಡೆಸಲು ಸೂಚಿಸಿದರು.
ಕಾರ್ಯಕ್ರಮದ ನಿರೂಪಕರು ಹಾಗೂ ಡಿ.ದೇವರಾಜ ಅರಸು ಅವರ ಜೀವನಗಾಥೆಯನ್ನು ಸವಿವರವಾಗಿ ತಿಳಿಸಬಲ್ಲ ನುರಿತ ಉಪನ್ಯಾಸಕರನ್ನು ಕಾರ್ಯಕ್ರಮಕ್ಕೆ ಆಹ್ವಾನಿಸಬೇಕು ಎಂದು ತಿಳಿಸಿದರು.
ಕಾರ್ಯಕ್ರಮದಲ್ಲಿ ಭಾಗವಹಿಸಿರುವ ಗಣ್ಯ ವ್ಯಕ್ತಿಗಳಿಗೆ, ಅಧಿಕಾರಿಗಳಿಗೆ, ವಿವಿಧ ಸಮುದಾಯಗಳ ಪದಾಧಿಕಾರಿಗಳಿಗೆ. ಸಾರ್ವಜನಿಕರಿಗೆ, 2ನೇಪುಟಕ್ಕೆ

ಮೊದಲನೇ ಪುಟದಿಂದ

# ವಿಮೆ ಇಲ್ಲಾಂದ್ರೆ ಇಂಧನವಿಲ್ಲ

**ಹೊಸ ವಾಹನಗಳ ವಿಮಾ ಅವಧಿ ಹೆಚ್ಚಳ**
ಹೊಸ ಕಾರುಗಳಿಗೆ ಥರ್ಡ್ ಪಾರ್ಟಿ ವಿಮೆಯ ಅವಧಿಯನ್ನು 3 ವರ್ಷದಿಂದ 4 ವರ್ಷಕ್ಕೆ, ಹೊಸ ದ್ವಿಚಕ್ರ ವಾಹನಗಳಿಗೆ 5 ವರ್ಷದಿಂದ 6 ವರ್ಷಕ್ಕೆ ಹೆಚ್ಚಿಸುವ ಪ್ರಸ್ತಾವನೆಯೂ ಇದೆ.
ಇದರ ಜತೆಗೆ ಸಾಮಾನ್ಯ ವಾಹನ ಮಾಲೀಕರಿಗೂ ಸುಲಭವಾಗಿ ಅರ್ಥವಾಗುವಂತಹ ಸರಳ ವಿಮಾ ಯೋಜನೆಗಳನ್ನು ರೂಪಿಸುವಂತೆ IRDAIಗೆ ಸೂಚಿಸಲಾಗಿದೆ. ವಿಮಾ ಪಾಲಿಸಿಗಳ ನಿಯಮಗಳು ಮತ್ತು ಷರತ್ತುಗಳನ್ನು ಜನಸಾಮಾನ್ಯರಿಗೆ ಗೊಂದಲವಾಗದ ರೀತಿಯಲ್ಲಿ ಸರಳಗೊಳಿಸುವುದು ಪ್ರಮುಖ ಉದ್ದೇಶವಾಗಿದೆ.

**ಅಪಘಾತ ಸಂತ್ರಸ್ತರ ಹಿತಾಸಕ್ತಿ ಮುಖ್ಯ**
ರಸ್ತೆ ಅಪಘಾತಗಳಲ್ಲಿ ಸಂತ್ರಸ್ತರಾಗುವವರಿಗೆ ಕಾನೂನು ಮತ್ತು ಆರ್ಥಿಕ ರಕ್ಷಣೆ ದೊರೆಯುವಂತೆ ಮಾಡುವುದೇ ಥರ್ಡ್ ಪಾರ್ಟಿ ವಿಮೆಯ ಪ್ರಮುಖ ಉದ್ದೇಶವಾಗಿದೆ. ದೇಶದಲ್ಲಿ ವಿಮೆ ಇಲ್ಲದೆ ಸಂಚರಿಸುವ ವಾಹನಗಳ ಸಂಖ್ಯೆಯನ್ನು ಕಡಿಮೆ ಮಾಡಿ, ರಸ್ತೆ ಸುರಕ್ಷತೆ ಹಾಗೂ ವಿಮಾ ಪಾಲನೆಯನ್ನು ಬಲಪಡಿಸುವ ನಿಟ್ಟಿನಲ್ಲಿ ಈ ಕ್ರಮಗಳನ್ನು ಪರಿಗಣಿಸಲಾಗಿದೆ.
ಆದರೆ ಸಾರ್ವಜನಿಕರು ಗಮನಿಸಬೇಕಾದ ಅಂಶವೆಂದರೆ, 'ವಿಮೆ ಇಲ್ಲ ಇಂಧನವಿಲ್ಲ' ನಿಯಮವು ಸದ್ಯ ದೇಶಾದ್ಯಂತ ಜಾರಿಯಾಗಿಲ್ಲ. ಕೇಂದ್ರ ಸರ್ಕಾರ, ಒಂಖಖಿಲೂ ಮತ್ತು ಖಖಆಂಖ ರೂಪುರೇಷೆ ಅಂತಿಮಗೊಳಿಸಿ ಅಧಿಕೃತ ಅಧಿಸೂಚನೆ ಹೊರಡಿಸಿದ ನಂತರವಷ್ಟೇ ಹೊಸ ವ್ಯವಸ್ಥೆಯ ಜಾರಿ ಸಾಧ್ಯವಾಗಲಿದೆ.

# ಜೋಳ ನೀಡಿದ ರೈತರ ಖಾತೆಗೆ ಹಣವನ್ನು ಜಮಾ ಮಾಡಿ: ಅಮೀನ ಪಾಷ ದಿದ್ದಿಗಿ

ಅನುಕೂಲ ಮಾಡಿಕೊಡಬೇಕು. ಗ್ರಾಮೀಣ ಭಾಗದ ರೈತ ಕೂಲಿ ಕಾರ್ಮಿಕರಿಗೆ ತಮ್ಮ ಗ್ರಾಮಗಳಲ್ಲಿ ವಿಬಿ ಜೀ–ರಾಮ್ ಜೀ ಯೋಜನೆಯಲ್ಲಿ ಗ್ರಾಮ ಪಂಚಾಯತಿಗಳಿಂದ ಕೂಲಿ ಕೆಲಸ ನೀಡುವ ಮೂಲಕ ಜನರು ವಲಸೆ ಹೋಗುವುದನ್ನು ತಡೆಯಬೇಕು .ರೈತ ವೀರೇಶಪ್ಪ ಹಿರೇಕೊಟ್ಟೇಕಲ್ ನರೇಗಾ ಯೋಜನೆಯಡಿಯಲ್ಲಿ ದನದ ಶೇಡ್ ನಿರ್ಮಿಸಿ ಕೊಂಡಿದ್ದರು ಕೂಡ ಇದುವರೆಗೆ ಹಣ ಬಿಡುಗಡೆ ಮಾಡದೆ ಇರುವ ಅಧಿಕಾರಿಯ ಮೇಲೆ ಸೂಕ್ತವಾದ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.
ಪಟ್ಟಣದ ವಾಲ್ಮೀಕಿ ವೃತ್ತದಿಂದ, ಬಸವವೃತ್ತ ಮೂಲಕ ತಹಸೀಲ್ ಕಛೇರಿಯವರೆಗೆ ನೂರಾರು ರೈತರು ಬಾರಕೋಲುಗಳನ್ನು ಹಿಡಿದು ಬಾರಕೋಲು ಚಳುವಳಿ .ಪ್ರತಿಭಟನೆ ನಡೆಸಿ ಮನವಿ ಸಲ್ಲಿಸಿದರು.
ಕಲ್ಮಠ ಶ್ರೀ ವಿರೂಪಾಕ್ಷ ಪಂಡಿತಾರಾಧ್ಯ ಶಿವಾಚಾರ್ಯ ಮಹಾಸ್ವಾಮಿಗಳು , ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ. ರಾಜ್ಯ ಗೌರವ ಅಧ್ಯಕ್ಷರಾದ ಅಮರೇಶಗೌಡ ಚಾಗಭಾವಿ , ಜಿಲ್ಲಾಧ್ಯಕ್ಷರಾದ ಕೆ.ವೈ.ಬಸವರಾಜ ನಾಯಕ, ಜಿಲ್ಲಾ ಉಪಾಧ್ಯಕ್ಷರಾದ ಉರುಕುಂದ ನಾಯಕ ,ತಾಲೂಕ ಸಮಿತಿ ಅಧ್ಯಕ್ಷ ಹೊಳೆಪ್ಪ ಉಟಕನೂರು. ತಾ. ಗೌರವ ಅಧ್ಯಕ್ಷರಾದ ವೀರೇಶ ನಾಯಕ ಬಜಾರ್ ರೈತ ಮುಖಂಡರಾದ ಬುಡ್ಡಪ್ಪ ನಾಯಕ ತಾಲೂಕ ಕಾರ್ಯದರ್ಶಿಶ್ಯಾಮಸಿಂಗ್ ರಜಪೂತ,ಜಯರಾಜ್ ಕೊಡ್ಲಿ ಸೇರಿದಂತೆ ಇನ್ನಿತರರು ಇದ್ದರು.

# ಅರಸು ಜನ್ಮ ದಿನಾಚರಣೆಗೆ ಅಗತ್ಯ ಸಿದ್ಧತೆಗೆ ಎಡಿಸಿ ಶಿವಾನಂದ ಸೂಚನೆ

ವಿದ್ಯಾರ್ಥಿಗಳಿಗೆ ಸರಿಯಾದ ಊಟದ ವ್ಯವಸ್ಥೆ ಕಲ್ಪಿಸಬೇಕು. ಅಲ್ಲದೆ ಡಿ.ದೇವರಾಜ ಅರಸು ಅವರ ಜನ್ಮ ದಿನಾಚರಣೆಯನ್ನು ಜಿಲ್ಲೆಯ ಎಲ್ಲ ತಾಲೂಕಿನಲ್ಲಿ ತಾಲ್ಲೂಕು ಮಟ್ಟದಲ್ಲಿ ತಹಶೀಲ್ದಾರರ ಅಧ್ಯಕ್ಷತೆಯಲ್ಲಿ, ಜನಪ್ರತಿನಿಧಿಗಳು, ಸಂಘ ಸಂಸ್ಥೆಗಳ ಪದಾಧಿಕಾರಿಗಳ ಹಾಗೂ ಅಧಿಕಾರಿಗಳ ಸಭೆಯನ್ನು ಕರೆದು ಸಮಾಲೋಚಿಸಿ ಅರ್ಥಪೂರ್ಣವಾಗಿ ಆಚರಿಸಲು ಅಗತ್ಯ ಕ್ರಮ ವಹಿಸಬೇಕು. ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಮತ್ತು ಸಿಬ್ಬಂದಿಯವಯವರು ಕಡ್ಡಾಯವಾಗಿ ಈ ಜಯಂತಿ ಕಾರ್ಯಕ್ರಮದಲ್ಲಿ ಭಾಗಿಯಾಗಬೇಕೆಂದು ಅಪರ ಜಿಲ್ಲಾಧಿಕಾರಿಗಳು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.
ಈ ವೇಳೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿ ಸುನೀತಾ ಅವರು ಮಾತನಾಡಿ, ಅರಸು ಅವರ ಜನ್ಮ ದಿನಾಚರಣೆ ಅಂಗವಾಗಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಗೌರವ ಮತ್ತು ವಸತಿ ನಿಲಯದಲ್ಲಿ ವ್ಯಾಸಂಗ ಮಾಡಿ ಶೈಕ್ಷಣಿಕ ಸಾಧನೆ ಮಾಡಿದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಸಭೆಗೆ ಮಾಹಿತಿ ನೀಡಿದರು.
ರಾಯಚೂರು ನಗರದಲ್ಲಿ ಹಿಂದುಳಿದ ವರ್ಗಗಳ ಜನಾಂಗ ಹೆಚ್ಚಿನ ಸಂಖ್ಯೆಯಲ್ಲಿದ್ದು, ಈ ಸಮುದಾಯದ ಸಭೆ ಸಮಾರಂಭಗಳು, ಸಾಂಸ್ಕೃತಿಕಾ ಕಾರ್ಯಕ್ರಮಗಳನ್ನು ಹಾಗೂ ದೊಡ್ಡ ಮಟ್ಟದ ಕಾರ್ಯಕ್ರಮಗಳನ್ನು ಆಯೋಜಿಸಲು ಯಾವುದೇ ಸಮುದಾಯ ಭವನ ಇರುವುದಿಲ್ಲ. ಆದಕಾರಣ ಸುಸಜ್ಜಿತವಾದ ಭವನ ಅವಶ್ಯಕತೆಯಿದೆ ಎಂದು ಸುಮುದಾಯದವರಿಂದ ಬೇಡಿಕೆ ಇರುವ ಕಾರಣ 5 ಕೋಟಿ ರೂ.ವೆಚ್ಚದಲ್ಲಿ ದೇವರಾಜ ಸ್ಮಾರಕ ಭವನ ನಿರ್ಮಾಣದ ಮಂಜೂರಾತಿ ನೀಡುವಂತೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಸರ್ಕಾರಕ್ಕೆ ಪ್ರಸ್ತಾವನೆ ಕಳಿಸಲಾಗಿದೆ ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.
ಇದೇ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಸಹಾಯಕ ಉಪ ಕಾರ್ಯದರ್ಶಿ ರಾಘವೇಂದ್ರ ಕೆ., ಸಾರ್ವಜನಿಕ ಶಿಕ್ಷಣ ಇಲಾಖೆಯ ಕೆ.ರಂಗಸ್ವಾಮಿ, ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಸರಸ್ವತಿ, ಕೃಷಿ ಇಲಾಖೆಯ ಸಹಾಯಕ ನಿರ್ದೇಶಕಿ ಪುಷ್ಪಲತಾ, ಎ.ಡಿ.ಗೋಕಲ, ಹಿಂದುಳಿದ ಒಕ್ಕೂಟದ ಜಿಲ್ಲಾಧ್ಯಕ್ಷರಾದ ಕೆ.ಶಾಂತಪ್ಪ, ಗಾಯಿತ್ರಿ, ಕವಿತಾ, ಜಮುನಾ, ಅಶ್ವಿನಿ, ಇಂದಿರಾ, ಜಿ.ವೆಂಕಟೇಶ, ಸಿದ್ದರಾಜ್, ಶರಣಬಸವ ಕೆ., ದೇವಂದ್ರಪ್ಪ, ಎಮ್.ನರಸಗೌಡ ಈಡಿಗ, ಶಿವರಾಜ ಕುಂಬಾರ, ವಿಜಯಬಾಸ್ಕರ್, ರವಿ ಕುಮಾರ್, ಪ್ರಕಾಶ್ ವಕೀಲ, ಅಶೋಕ ಗುತ್ತೇದಾರ, ರಾಮಕೃಷ್ಣ, ಆಂಜಿನೇಯ ಯಾದವ್ ಸೇರಿದಂತೆ ಇತರರು ಇದ್ದರು.


# ರೈತರು ಹಾಗೂ ಬಡವರ ಏಳಿಗೆಗೆ ಸಹಕಾರಿ ಕ್ಷೇತ್ರ ವರದಾನ: ಹನುಮೇಶ ಜೇನೂರು

ನಿವ್ವಳ ಲಾಭ ಗಳಿಸಿ ಸದಸ್ಯರಿಗೆ 16% ಲಾಭಾಂಶ ನೀಡಲು ಸಂತೋಷ ವಾಗುತ್ತದೆ ಎಂದರು. ಇದೇ ಸಂದರ್ಭದಲ್ಲಿ ಸಹಕಾರಿಯ ಅತ್ಯುತ್ತಮ ಗ್ರಾಹಕ ಸದಸ್ಯರಿಗೆ "ಉತ್ತಮ ಗ್ರಾಹಕ" ಪ್ರಶಸ್ತಿ ನೀಡಿ ಸನ್ಮಾನಿಸಲಾಯಿತು. ಕೇವಲ 5 ವರ್ಷಗಳಲ್ಲಿ ಸಂಸ್ಥೆಯು ಅಭೂತಪೂರ್ವವಾಗಿ ಬೆಳೆದು ನಿಂತಿದ್ದು, ಇದಕ್ಕೆ ಆಡಳಿತ ಮಂಡಳಿ, ಸಿಬ್ಬಂದಿ ವರ್ಗ ಹಾಗೂ ಪಿಗ್ಮಿ ಸಂಗ್ರಾಹಕರ ಶ್ರಮವೇ ಮುಖ್ಯ ಕಾರಣವಾಗಿದೆ. ಪ್ರಸ್ತುತ ಸಂಘವು ರೂ.8 ಕೋಟಿ ದುಡಿಯುವ ಬಂಡವಾಳವನ್ನು ಹೊಂದಿದ್ದು, ಸದಸ್ಯರಿಗೆ ಶೇಕಡಾ 16% ರಷ್ಟು ಲಾಭಾಂಶ ಘೋಷಣೆ ಮಾಡಿರುವುದು ಶ್ಲಾಘನೀಯವಾಗಿದೆ. ಸಹಕಾರಿ ಸಂಘಗಳು ಕೇವಲ ಹಣಕಾಸಿನ ವ್ಯವಹಾರಕ್ಕೆ ಸೀಮಿತವಾಗದೆ, ಸಾಮಾಜಿಕ ಸೇವಾ ಕಾರ್ಯಗಳನ್ನು ಕೈಗೊಳ್ಳಬೇಕು ಹಾಗೂ ಸದಸ್ಯರ ಅನುಕೂಲಕ್ಕಾಗಿ ವಿನೂತನ ಯೋಜನೆಗಳನ್ನು ಹಮ್ಮಿಕೊಳ್ಳಬೇಕು ಎಂದು ಸಭೆಯಲ್ಲಿ ಅಭಿಪ್ರಾಯ ಪಡಲಾಯಿತು.
ಈ ಕಾರ್ಯಕ್ರಮದಲ್ಲಿ ಸಹಕಾರಿ ನಿರ್ದೇಶಕರುಗಳಾದ ಪ್ರಕಾಶ ಹಿರೇಮಠ ಪೋತ್ನಾಳ್, ಚನ್ನಬಸಯ್ಯ ಸ್ವಾಮಿ ಪೋತ್ನಾಳ್, ವಿ. ಶಿವನಪ್ಪ ಸಾಯುಕಾರ ಪೋತ್ನಾಳ್, ಅಮರೇಗೌಡ, ವಿರೂಪಣ್ಣ ಜೂಕೂರು, ಚಾಮರಾಜ, ಬಸವರಾಜ ನೀಲವಂಜಿ, ಎಸ್. ಅಮರೇಶ ಮಾನ್ವಿ, ಎಚ್. ಚಂದರಶೇಖರ ಮಾನ್ವಿ, ಬಿಲಾಲ್ ಹಾಗೂ ಸಹಕಾರಿಯ ಮುಖ್ಯ ಕಾರ್ಯನಿರ್ವಹಣಾಧಿಕಾರಿ ದೇವರಾಜ ಅವರು ಉಪಸ್ಥಿತರಿದ್ದು ಕಾರ್ಯಕ್ರಮವನ್ನು ನಡೆಸಿಕೊಟ್ಟರು.

## ಸಾಲು

ಮಧ್ಯರಾತ್ರಿ ಮೀರಿತ್ತು, ಅನಾರೋಗ್ಯದಿಂದ ಬಳಲುತ್ತಿದ್ದ ಅವನ ದೇಹವು ಹಾಸಿಗೆಯಲ್ಲಿತ್ತು, ಆದರೆ ನಿದ್ರೆ ಬರುತ್ತಿರಲಿಲ್ಲ. ಅವನು ಎದ್ದು, ಮೇಜಿನ ಮೇಲೆ ಬಿಳಿ ಕಾಗದದ ತುಂಡನ್ನು ಇಟ್ಟು, ಪೆನ್ನು ಎತ್ತಿಕೊಂಡು, ತನಗೆ ಪರಿಚಿತನಾದ ಯಾರೋ ಒಬ್ಬ ವ್ಯಕ್ತಿಯ ಹೆಸರನ್ನು ಬರೆಯಲು ಪ್ರಾರಂಭಿಸಿದನು. ಒಂದು ಹೆಸರು ನೆನಪಿಗೆ ಬಂತು, ಮತ್ತು ಅವನು ತೀರಿಕೊಂಡಿದ್ದ. ಎರಡನೆಯದು ಹೊರಹೊಮ್ಮಿತು...... ಸಂಬಂಧವು ವರ್ಷಗಳ ಹಿಂದೆಯೇ ಮುರಿದುಹೋಗಿತ್ತು. ಮೂರನೆಯದು ನೆನಪಿಗೆ ಬಂದಿತು...... ಅವನಿಗೆ ಇನ್ನು ಸಮಯವಿಲ್ಲ. ಬಹಳ ಸಮಯದ ನಂತರ, ಅವನು ಲಕೋಟೆಯ ಮೇಲೆ ಒಂದು ಹೆಸರನ್ನು ಬರೆದನು....... ಆ ಕ್ಷಣದಲ್ಲಿ, ಒಳಗಿನಿಂದ ಒಂದು ಧ್ವನಿ ಕೇಳಿಸಿತು, "ಈಗ ಮಲಗು..... ಎರಡು ಗಂಟೆಯಾಗಿದೆ," ಅವನು ಮೆಲ್ಲನೆ ಹೇಳಿದನು... ಮತ್ತು ಇದು ಪತ್ರವೇ? ಧ್ವನಿ ಉತ್ತರಿಸಿತು: "ಇಲ್ಲ, ಪತ್ರ..... ವಿಳಾಸದಾರರ ವಿಳಾಸ ಮುಗಿದಿದೆ."

ನಾನು ಲಕೋಟೆಯ ಮೇಲೆ ಬರೆದಿದ್ದ ನನ್ನ ಹೆಸರನ್ನು ಮತ್ತೊಮ್ಮೆ ನೋಡಿ ಮೇಣದಬತ್ತಿಯನ್ನು ಹಚ್ಚಿದೆ –



**(ಸೈಯದ್ ಮೊಹಿಯುದ್ದೀನ್ ಅಮ್ಜದ್ ಖಾದ್ರಿ)**

# ನಿಗದಿತ ಸಮಯದೊಳಗೆ ಕಾರ್ಯ ಪೂರ್ಣಗೊಳಿಸಿ: ಜುಬಿನ್ ಮೊಹೊಪಾತ್ರ



ಧೈರ್ಯದ ದಾರಿ

**ರಾಯಚೂರು ಆಗಸ್ಟ್ 05 :** ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣ ಕುರಿತು ಸಂಬಂಧಿಸಿದಂತೆ ರಾಯಚೂರು ಗ್ರಾಮೀಣ ಹಾಗೂ ರಾಯಚೂರು ನಗರದಲ್ಲಿ ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯ ಪ್ರಗತಿಯಲ್ಲಿದ್ದು, ಗಣತಿ ನಮೂನೆಗಳ ವಿತರಣೆ ಕಾರ್ಯ ಶೇ.100ರಷ್ಟು ಪೂರ್ಣಗೊಳಿಸಿದ್ದು, ಆಗಸ್ಟ್ 04ರವರೆಗೆ ಗ್ರಾಮೀಣ ಭಾಗದ ಶೇ.82.80 ಹಾಗೂ ನಗರ ಭಾಗದಲ್ಲಿ ಶೇ.69.74ರಷ್ಟು ಗಣತಿ ನಮೂನೆಗಳ ಗಣಕೀಕರಣವಾಗಿದೆ ಎಂದು ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹೊಪಾತ್ರ ಅವರು ಹೇಳಿದರು.
ಆಗಸ್ಟ್ 04ರ ಮಂಗಳವಾರ ದಂದು ನಗರದ ಹಳೆ ನಗರಸಭೆಯ ಸಭಾಂಗಣದಲ್ಲಿ ಎಸ್.ಐ.ಆರ್. ಕುರಿತು ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳೊಂದಿಗೆ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.
ರಾಯಚೂರು ನಗರ ವಿಧಾನಸಭೆಯ ವ್ಯಾಪ್ತಿಯ ಶೇ.30.04 ಹಾಗೂ ರಾಯಚೂರು ಗ್ರಾಮೀಣ ಭಾಗದಲ್ಲಿ ಶೇ.16.99ರಷ್ಟು ನಮೂನೆಗಳು ಗಣಕೀಕರಣ ಮಾಡುವುದು ಬಾಕಿ ಇದೆ. ಪ್ರತಿದಿನ ಬಿಎಲ್‌ಗಳು ಭೌತಿಕ ಪರಿಶೀಲನೆಯೊಂದಿಗೆ ಗುರುತಿಸಿದ ಗೈರು 20.285, ಸ್ಥಳಾಂತರ 57213, ಹಾಗೂ 21,796 ಜನ ಮರಣ ಹೊಂದಿದ್ದ ಮತದಾರರ ವಿವರಗಳನ್ನು ತಮ್ಮ ಅಪ್‌ನಲ್ಲಿ ಅಪ್ಲೋಡ್ ಮಾಡಿರುತ್ತಾರೆ. ಪರಿಶೀಲನೆ ಸಂಬಂಧಿಸಿದ ಬಿಎಲ್‌ಒಗಳು ರಾಜಕೀಯ ಪಕ್ಷಗಳಿಂದ ನೇಮಿಸಲಾದ ಬಿಎಲ್‌ಎ ರವರಿಗೆ ಮತದಾರರ ವಿವರವುಳ್ಳ ಎ.ಎಸ್.ಡಿ.ಡಿ.ಒ ಯಾದಿಗಳನ್ನು ನೀಡಿದ್ದು, ಬಿಎಲ್‌ಎ ರವರು ಬಿಎಲ್‌ಓಗಳು ನೀಡಿದ ಮತದಾರರ ವಿವರವುಳ್ಳ ಎ.ಎಸ್.ಡಿ.ಡಿ.ಒ ಯಾದಿಗಳನ್ನು ಪಡೆದು ಸ್ವೀಕೃತಿಯನ್ನು ನೀಡಲು ನಿರಾಕರಿಸಿದ್ದಾಗಿ ಬಿಎಲ್‌ಓಗಳು ತಿಳಿಸಿರುತ್ತಾರೆ. ಬಿಎಲ್‌ಓಗಳಿಗೆ ಸೂಕ್ತ ಸ್ವೀಕೃತಿ ನೀಡಲು ಬಿಎಲ್‌ಎ ಅವರಿಗೆ ಸೂಚಿಸಲು ತಿಳಿಸಿದರು.
ಕರಡು ಮತದಾರರ ಪ್ರಕಟಣೆ ಮುಂಚೆ ಇನ್ನೂ ಯಾವ ಮತದಾರರು ಇಈ ನೀಡಿರುವುದಿಲ್ಲ. ಅಂತವರನ್ನು ಕ ಮಾಡಿ ಕೂಡಲೇ ಸಲ್ಲಿಸಲು ಕ್ರಮವಹಿಸಬೇಕು. ಶೇ100 ರಷ್ಟು ಡಿಜಿಟಲೈಜೆಷನ್ ಪ್ರಕ್ರಿಯೆ ಕೈಗೊಳ್ಳಲು ಸಹಕರಿಸಬೇಕು. ಕರಡು ಮತದಾರರು ಪ್ರಕಟಣೆಗೊಂಡ ನಂತರ 18+ ಮತದಾರರ ಹುಡಿಕಿ ಸೇರ್ಪಡೆ ಮಾಡಿಸಬೇಕು. ನಮೊನೆಗಳನ್ನು ಸಲ್ಲಿಸದ ಮತದಾರರಿಗೆ ದಿನಾಂಕ:15–08–2026ರ ನಂತರ ನೋಟಿಸ್ ಜಾರಿಗೊಳಿಸುವ ಅಗತ್ಯವಿರುವುದರಿಂದ, ಈ ಪ್ರಕ್ರಿಯೆಯಲ್ಲಿ ಎಲ್ಲಾ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಸಹಕರಿಸುವಂತೆ ಪಾಲಿಕೆಯ ಆಯುಕ್ತರು ತಿಳಿಸಿದರು.
ಈ ವೇಳೆ ರಾಯಚೂರು ತಹಶೀಲ್ದಾರ್ ಸುರೇಶ ವರ್ಮಾ ಅವರು ಮಾತನಾಡಿ, ಎಲ್ಲಾ ರಾಜಕೀಯ ಪಕ್ಷಗಳ ಪದದಾಧಿಕಾರಿಗಳಿಗೆ ಈಗಾಗಲೇ ಎಸ್‌ಡಿಡಿ ವರದಿ ಮತಗಟ್ಟೆವಾರು ಮಾಹಿತಿ ನೀಡಲಾಗಿದು, ಪ್ರತಿದಿನ ತಮ್ಮ ಅಧಿಕೃತ ಇ–ಮೇಲ್ ಐಡಿಗೆ ಸಹ ಮೇಲ್ ಮಾಡಲಾಗುತ್ತಿದೆ. 53–ರಾಯಚೂರು ಗ್ರಾಮೀಣ ವಿಧಾನಸಭಾ ಕ್ಷೇತ್ರದಲ್ಲಿ ಎಸ್‌ಡಿಡಿ ಒಟ್ಟು 40765 ಇದ್ದು, 54–ರಾಯಚೂರು (ನಗರ) ವಿಧಾನಸಭಾ ಕ್ಷೇತ್ರದಲ್ಲಿ ಎಸ್‌ಡಿಡಿ ಒಟ್ಟು 76731 ಇದ್ದು, ಬಿಎಲ್‌ಎ–2 ರವರಿಂದ ಮತಗಟ್ಟೆವಾರು ಪರಿಶೀಲಿಸಿ ಮಾಡಿಸಿ ಯಾವುದೇ ಆಕ್ಷಪಣೆ ಇದ್ದಲ್ಲಿ ದಿನಾಂಕ: 07–08–2026ರೊಳಗೆ ವರದಿ ನೀಡಲು ತಿಳಿಸಿದರು.
ಮತಗಟ್ಟೆ ಕೇಂದ್ರಗಳ ಸ್ಥಳ ಬದಲಾವಣೆ: 53 ರಾಯಚೂರು ಗ್ರಾಮೀಣ ಮತ್ತು 54 ರಾಯಚೂರು ನಗರ ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ ಮತದಾರರ ಪಟ್ಟಿಯ ಮುಖಪುಟದಲ್ಲಿ ಸ್ಥಳ ಬದಲಾವಣೆ ಕುರಿತು ಸಭೆಯಲ್ಲಿ ಹಾಜರಿದ್ದ ಎಲ್ಲಾ ರಾಜಕೀಯ ಪಕ್ಷಗಳ ಪ್ರತಿನಿಧಿಗಳಿಗೆ ಮಾಹಿತಿ ನೀಡಲಾಯಿತು. ಪ್ರಸ್ತುತ ಯಾವುದೇ ಪ್ರಕರಣಗಳು ತಮ್ಮ ಗಮನಕ್ಕೆ ಬಂದಿರುವುದಿಲ್ಲ. ಮುಂದಿನ ವರ್ಷದ ವಿಶೇಷ ಪರಿಷ್ಕರಣೆ ಸಂದರ್ಭದಲ್ಲಿ ಅಗತ್ಯ ಕ್ರಮ ಕೈಗೊಳ್ಳುವುದು ಸೂಕ್ತವೆಂದು ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಅಭಿಪ್ರಾಯ ವ್ಯಕ್ತಪಡಿಸಿದರು.
ಇದೇ ಸಂದರ್ಭದಲ್ಲಿ ರಾಯಚೂರು ಮಹಾನಗರ ಪಾಲಿಕೆಯ ಆಡಳಿತ ವಿಭಾಗದ ಉಪ ಆಯುಕ್ತ ಶರಣಪ್ಪ, ಕಂದಾಯ ವಿಭಾಗದ ಉಪ ಆಯುಕ್ತೆ ಸಂತೋಷ ರಾಣಿ ಸೇರಿದಂತೆ ವಿವಿಧ ರಾಜಕೀಯ ಪಕ್ಷಗಳ ಮುಖಂಡರು, ಚುನಾವಣೆ ಶಾಖೆಯ ಅಧಿಕಾರಿ, ಸಿಬ್ಬಂದಿಗಳು ಸಭೆಯಲ್ಲಿ ಇದ್ದರು.

# ವ್ಯಸನಮುಕ್ತ ದಿನಾಚರಣೆ



**ಧಾರವಾಡ, ಆ5:** ಮಹಾಂತ ಶಿವಯೋಗಿಗಳು ಅವರು ಮಾದಕ ವ್ಯಸನಿಗಳನ್ನು ಹಾಗೂ ಅವರ ದುಶ್ಚಟಗಳನ್ನು ಹುಡುಕಿ, ತಮ್ಮ ಜೋಳಿಗೆಯಲ್ಲಿ ಮಾದಕ ವಸ್ತುಗಳನ್ನು ಹಾಕಿಸಿಕೊಳ್ಳುವ ಮೂಲಕ ವ್ಯಸನಮುಕ್ತ ಸಮಾಜ ನಿರ್ಮಾಣಕ್ಕೆ ಶ್ರಮಿಸುತ್ತಿದ್ದರು ಎಂದು ಮುರುಘಾಮಠದ ಪೂಜ್ಯ ಶ್ರೀ ಡಾ ಮಲ್ಲಿಕಾರ್ಜುನ ಮಹಾಸ್ವಾಮಿಗಳು ಹೇಳಿದರು.

ಅವರು ಮಾನಸಿಕ ಆರೋಗ್ಯ ಮತ್ತು ನರ ವಿಜ್ಞಾನಗಳ ಸಂಸ್ಥೆ ಸಭಾಭವನದಲ್ಲಿ ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿ ಹಾಗೂ ವಾರ್ತಾ ಇಲಾಖೆ ಆಯೋಜಿಸಿದ ವ್ಯಸನ ಮುಕ್ತ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ, ಮಾತನಾಡಿದರು.

ಆರೋಗ್ಯವಂತ ವ್ಯಕ್ತಿಯಿಂದ ಮಾತ್ರ ಆರೋಗ್ಯವಂತ ಸಮಾಜ ನಿರ್ಮಾಣ ಸಾಧ್ಯ ಎಂದು ಅವರು ನಂಬಿದ್ದರು. ಅವರ ದೃಷ್ಟಿಯಲ್ಲಿ ಆರೋಗ್ಯವೆಂದರೆ ಕೇವಲ ದೈಹಿಕ ಆರೋಗ್ಯವಲ್ಲ, ಅದು ಮಾನಸಿಕ, ಆಧ್ಯಾತ್ಮಿಕ ಹಾಗೂ ಸಾಮಾಜಿಕ ಆರೋಗ್ಯವಾಗಿತ್ತು ಎಂದು ತಿಳಿಸಿದರು.

ಪೂಜ್ಯ ಮಹಾಂತ ಶಿವಯೋಗಿಗಳು ತಮ್ಮ ಜೀವನದುದ್ದಕ್ಕೂ ಸರಳತೆ, ಶಿಸ್ತು ಮತ್ತು ಸಂಯಮದ ಪಾಠವನ್ನು ಸಾರಿದರು. ಅವರ ಜೀವನವೇ ನಮಗೆ ದೊಡ್ಡ ಸಂದೇಶ. ಅಂತಹ ಮಹಾನ್ ಚೇತನದ ಜನ್ಮದಿನದಂದು, ಯುವಜನತೆ ಒಂದು ದೃಢ ಸಂಕಲ್ಪ ಮಾಡಬೇಕಿದೆ. ವ್ಯಸನವೆಂಬ ಈ ಸಾಮಾಜಿಕ ಪಿಡುಗನ್ನು ಬೇರುಸಹಿತ ಕಿತ್ತೊಗೆಯುವ ನಿರ್ಧಾರ ಮಾಡಬೇಕಿದೆ ಎಂದು ತಿಳಿಸಿದರು.

ಮಾನವನ ಶರೀರವು ಅತ್ಯುತ್ತಮವಾದದ್ದು. ಆದ್ದರಿಂದ ಪ್ರತಿಯೊಬ್ಬ ವ್ಯಕ್ತಿಯೂ ಯಾವುದೇ ವ್ಯಸನಕ್ಕೆ ಅಂಟಿಕೊಳ್ಳಬಾರದು. ಶರೀರ ಹಾಳಾದರೆ ಜೀವನದಲ್ಲಿ ಯಶಸ್ಸು ಸಾಧಿಸಲು ಸಾಧ್ಯವಿಲ್ಲ. ಹೀಗಾಗಿ ಎಲ್ಲರೂ ತಮ್ಮ ಆರೋಗ್ಯವನ್ನು ಕಾಪಾಡಿಕೊಂಡು ಉತ್ತಮ ಜೀವನ ನಡೆಸಬೇಕು ಎಂದು ಅವರು ಹೇಳಿದರು.

ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ ಮಾತನಾಡಿ. ಪ್ರತಿಯೊಬ್ಬ ವಿದ್ಯಾರ್ಥಿಯೂ ಮಾದಕ ವ್ಯಸನಕ್ಕೆ ಹಾಗೂ ದುಶ್ಚಟಗಳಿಗೆ ಬಲಿಯಾಗಬಾರದು. ವ್ಯಸನದಿಂದ ಉತ್ತಮ ಜೀವನ ಹಾಳಾಗುವುದರಿಂದ ತಮ್ಮ ಜೀವನವನ್ನು ಕಾಪಾಡಿಕೊಳ್ಳಬೇಕು. ಕುಟುಂಬ ಹಾಗೂ ಸಮಾಜವು ದುಶ್ಚಟ ಮತ್ತು ವ್ಯಸನದಿಂದ ಹಾಳಾಗದಂತೆ ಪ್ರತಿಯೊಬ್ಬರೂ ಜಾಗೃತಿ ವಹಿಸಬೇಕು.

ಕುಟುಂಬದ ಮುಖ್ಯಸ್ಥರು ದುಶ್ಚಟಕ್ಕೆ ಬಿದ್ದರೆ ಆ ಕುಟುಂಬದ ಮೇಲೆ ಆರ್ಥಿಕ ಹೊರೆ ಬೀಳುತ್ತದೆ. ಸಾವಿರಾರು ಜನರು ದುಶ್ಚಟಗಳಿಗೆ ಬಿದ್ದು ತಮ್ಮ ಪ್ರಾಣವನ್ನೇ ಕಳೆದುಕೊಳ್ಳುತ್ತಿರುವುದು ಆತಂಕಕಾರಿ ಹಾಗೂ ಪ್ರತಿಯೊಬ್ಬರೂ ದುಶ್ಚಟಕ್ಕೆ ಬೀಳದೆ, ಒಳ್ಳೆಯ ಜೀವನ ರೂಪಿಸಿಕೊಳ್ಳಬೇಕು ಎಂದು ಅವರು ಹೇಳಿದರು.

ಡಿಮಾನ್ಸ್ ನಿರ್ದೇಶಕ ಡಾ. ಅರುಣಕುಮಾರ ಸಿ, ಮಾತನಾಡಿ. ಮಾದಕ ವ್ಯಸನವು ವ್ಯಕ್ತಿಯ ದೇಹಕ್ಕೆ ಮಾತ್ರವಲ್ಲ, ಇಡೀ ಕುಟುಂಬಕ್ಕೂ ಹಾನಿಯನ್ನುಂಟು ಮಾಡುತ್ತದೆ. ವ್ಯಸನದ ಪರಿಣಾಮವಾಗಿ ಅಪಘಾತಗಳು ಸಂಭವಿಸುವ ಸಾಧ್ಯತೆಯೂ ಹೆಚ್ಚಾಗುತ್ತದೆ. ಒಬ್ಬ ಶಿಕ್ಷಕರ ಪ್ರೋತ್ಸಾಹವು ನೂರು ವಿದ್ಯಾರ್ಥಿಗಳ ಜೀವನದಲ್ಲಿ ಸಕಾರಾತ್ಮಕ ಬದಲಾವಣೆ ತರಬಲ್ಲದು. ಪ್ರತಿಯೊಬ್ಬ ವ್ಯಕ್ತಿಯ ಜೀವನ ಅಮೂಲ್ಯವಾಗಿದ್ದು, ಮಾದಕ ವ್ಯಸನದಿಂದ ದೂರವಿದ್ದು ನಶಾ ಮುಕ್ತ ಭಾರತ ನಿರ್ಮಾಣಕ್ಕೆ ಪ್ರತಿಯೊಬ್ಬರೂ ತಮ್ಮ ಕೊಡುಗೆ ನೀಡಬೇಕು ಎಂದು ಅವರು ಹೇಳಿದರು.

ಕಾರ್ಯಕ್ರಮದಲ್ಲಿ ಮಾನಸಿಕ ಆರೋಗ್ಯ ವರ್ಧನೆ ಮತ್ತು ವ್ಯಸನ ಮುಕ್ತತೆಯ ಉಪಾಯಗಳ ಕುರಿತು ಡಿಮ್ಹಾನ್ಸ್ ಮನೋವೈದ್ಯಕೀಯ ವಿಭಾಗದ ಸಹಾಯಕ ಪ್ರಾಧ್ಯಾಪಕ ಡಾ. ಮಹೇಶ ಎಂ. ಅವರು ವಿಶೇಷ ಉಪನ್ಯಾಸ ನೀಡಿದರು. ವೈದ್ಯಕೀಯ ಅಧೀಕ್ಷಕ ಡಾ. ರಾಘವೇಂದ್ರ ನಾಯಕ ಅವರು ಪ್ರತಿಜ್ಞಾವಿಧಿ ಬೋಧಿಸಿದರು. ವೇದಿಕೆಯಲ್ಲಿ ಡಿಮ್ಹಾನ್ಸ ಮುಖ್ಯ ಆಡಳಿತಧಿಕಾರಿ ಮೇಜರ್ ಸಿದ್ದಲಿಂಗಯ್ಯ ಹಿರೇಮಠ, ಶುಷ್ರೂಷಾಧಿಕಾರಿ ಪಾರ್ವತಿ ಕೆಂಗನೂರು, ಆರ್ಥಿಕ ಸಲಹೆಗಾರ ತಮ್ಮಣ್ಣ ಕೃಷ್ಣಪ್ಪ ಈಳಿಗೇರ ಅವರು ಇದ್ದರು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ವಾರ್ತಾ ಸಹಾಯಕರಾದ ನಸೀರಾಬಿ ವೈ. ಶೇಖ ಅವರು ಸ್ವಾಗತಿಸಿದರು. ಡಿಮಾನ್ಸ್ ಮನೋವೈದ್ಯಕೀಯ ಸಮಾಜದ ಕಾರ್ಯಕರ್ತ ಡಾ. ಅಶೋಕ ಕೋರಿ ಅವರು ನಿರೂಪಿಸಿದರು. ಡಿಮಾನ್ಸ್ ಮನೋವೈದ್ಯಕೀಯ ಸಮಾಜದ ಕಾರ್ಯಕರ್ತ ಆರ್.ಎಮ್ ತಿಮ್ಮಾಪುರ ಅವರು ವಂದಿಸಿದರು.

ಕಾರ್ಯಕ್ರಮದಲ್ಲಿ ಮನೋವೈದ್ಯಕೀಯ ವಿಭಾಗದ ಸಹ ಪ್ರಾಧ್ಯಾಪಕ ಡಾ. ಮಂಜುನಾಥ ಭಜಂತ್ರಿ, ಸೈಕ್ಯಾಟ್ರಿಕ್ ನರ್ಸಿಂಗ್ ವಿಭಾಗದ ಪ್ರಾಧ್ಯಾಪಕ ಹಾಗೂ ಮುಖ್ಯಸ್ಥರಾದ ಡಾ. ಆರ್.ಶ್ರೀವಾಣಿ, ಸಹ ಪ್ರಾಧ್ಯಾಪಕರಾದ ಡಾ. ಸುನೀಲಕುಮಾರ ರೋಣದ, ಪ್ರಶಾಂತ ಪಾಟೀಲ, ಓಬಾ ನಾಯ್ಕ, ಡಾ. ಶ್ರೀಧರ ಕುಲಕರ್ಣಿ ಹಾಗೂ ಡಿಮ್ಹಾನ್ಸ್ ಸಂಸ್ಥೆಯ ಪ್ರಾಧ್ಯಾಪಕರು, ನರ್ಸಿಂಗ್ ವಿದ್ಯಾರ್ಥಿಗಳು, ಇಲಕಲ್ಲ ಮಹಾಂತಪ್ಪನವರ ಅಭಿಮಾನಿಗಳು ಭಾಗವಹಿಸಿದ್ದರು.

# ಕೆ.ಆರ್. ಮಾರುಕಟ್ಟೆ ಅಭಿವೃದ್ಧಿಗೆ ವೇಗ: ಮಹೇಶ್ವರ್ ರಾವ್



**ಬೆಂಗಳೂರು, ಆ.5–**ಕೆ.ಆರ್. ಮಾರುಕಟ್ಟೆಯಲ್ಲಿ ಮೂಲಸೌಕರ್ಯ ಅಭಿವೃದ್ಧಿ, ಸ್ವಚ್ಛತೆ, ಸಂಚಾರ, ಅಗ್ನಿ ಸುರಕ್ಷತೆ ಹಾಗೂ ಸಾರ್ವಜನಿಕ ಸೌಲಭ್ಯಗಳ ಕಾಮಗಾರಿಗಳನ್ನು ತ್ವರಿತವಾಗಿ ಪೂರ್ಣಗೊಳಿಸುವಂತೆ ಪಾಲಿಕೆ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಅಧಿಕಾರಿಗಳಿಗೆ ಸೂಚಿಸಿದರು

ಮಾರುಕಟ್ಟೆ ಪ್ರದೇಶದಲ್ಲಿ ಸ್ಥಳ ಪರಿಶೀಲನೆ ನಡೆಸಿದ ಅವರು, ಮಳೆನೀರು ನಿಲ್ಲುವ ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸಲು ಸಮಗ್ರ ಪ್ಲಂಬಿಂಗ್ ಹಾಗೂ ಒಳಚರಂಡಿ ವ್ಯವಸ್ಥೆ ರೂಪಿಸುವಂತೆ ನಿರ್ದೇಶಿಸಿದರು. ಅಗತ್ಯವಿರುವ ಕಡೆ ರಸ್ತೆ ಸಮತಟ್ಟುಗೊಳಿಸಿ ಕಾಂಕ್ರೀಟೀಕರಣ ಕೈಗೊಳ್ಳಬೇಕು. ಅನಗತ್ಯ ಕಂಬಗಳು, ಅಡೆತಡೆಗಳು ಹಾಗೂ ಒತ್ತುವರಿಗಳನ್ನು ತೆರವುಗೊಳಿಸಿ ವಾಹನ ಮತ್ತು ಸಾರ್ವಜನಿಕರ ಸುಗಮ ಸಂಚಾರಕ್ಕೆ ಅವಕಾಶ ಕಲ್ಪಿಸಬೇಕು ಎಂದರು.

ತರಕಾರಿ ಹಾಗೂ ಹಣ್ಣು ಮಾರುಕಟ್ಟೆ ಮಾರ್ಗದಲ್ಲಿ ಅಗ್ನಿಶಾಮಕ ವಾಹನಗಳ ಸಂಚಾರಕ್ಕೆ ಕನಿಷ್ಠ 6 ಮೀಟರ್ ಅಗಲದ ಪ್ರವೇಶ ಮಾರ್ಗ ಕಲ್ಪಿಸಬೇಕು. ಅಗ್ನಿ ಸುರಕ್ಷತೆಗೆ ಅಡ್ಡಿಯಾಗುವ ಎಲ್ಲ ಅಡೆತಡೆಗಳನ್ನು ತೆರವುಗೊಳಿಸುವಂತೆ ಸೂಚಿಸಿದರು.

ಮಾರುಕಟ್ಟೆ ಪ್ರವೇಶ ದ್ವಾರಗಳು, ತ್ಯಾಜ್ಯ ಸಂಗ್ರಹಣಾ ಕೇಂದ್ರಗಳು ಹಾಗೂ ಅಗ್ನಿ ಸುರಕ್ಷತಾ ವಲಯಗಳ ಬಳಿ ಅನಧಿಕೃತ ವಾಹನ ನಿಲುಗಡೆ ವಿರುದ್ಧ ಕಟ್ಟುನಿಟ್ಟಿನ ಕ್ರಮ ಕೈಗೊಂಡು, ನಿಯಮ ಉಲ್ಲಂಘಿಸುವವರಿಗೆ ದಂಡ ವಿಧಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು. ಪ್ರಮುಖ ಪ್ರವೇಶ ದ್ವಾರಗಳಲ್ಲಿ ಬ್ಯಾರಿಕೇಡ್ ಅಳವಡಿಸುವ ಸಾಧ್ಯತೆಯನ್ನು ಪರಿಶೀಲಿಸುವಂತೆಯೂ ತಿಳಿಸಿದರು.

ತೆಂಗಿನಕಾಯಿ, ಬಾಳೆಹಣ್ಣು ಮಾರುಕಟ್ಟೆ ರಸ್ತೆ, ಹೋಟೆಲ್ ಮುಂಭಾಗ ಸೇರಿದಂತೆ ವಿವಿಧೆಡೆ ಇರುವ ಒತ್ತುವರಿಗಳನ್ನು ತೆರವುಗೊಳಿಸಬೇಕು. ಪಾದಚಾರಿ ಮಾರ್ಗಗಳಿಗೆ ಅಡ್ಡಿಯಾಗಿರುವ ವ್ಯಾಪಾರಿಗಳನ್ನು ಸ್ಥಳಾಂತರಿಸಿ, ಮಾರ್ಷಲ್‌ಗಳ ಮೂಲಕ ನಿರಂತರ ಮೇಲ್ವಿಚಾರಣೆ ನಡೆಸಬೇಕು ಎಂದರು.ತ್ಯಾಜ್ಯ ನಿರ್ವಹಣೆಗೆ ಅಗತ್ಯ ಕ್ರೇಟ್‌ಗಳು ಬಂದಿರುವುದರಿಂದ ಕೂಡಲೇ ಕಾರ್ಯಾಚರಣೆ ಆರಂಭಿಸಬೇಕು. ಅಗತ್ಯವಿರುವ ಕಡೆ ಬಯೋಗ್ಯಾಸ್ ಶೆಡ್‌ಗಳನ್ನು ತ್ಯಾಜ್ಯ ಸಂಗ್ರಹಣಾ ಕೇಂದ್ರಗಳಾಗಿ ಬಳಸಬೇಕು. ಟ್ರಾಲಿಗಳ ದುರಸ್ತಿಗೆ ಪ್ರತ್ಯೇಕ ಮೆಕ್ಯಾನಿಕ್ ನಿಯೋಜಿಸಬೇಕು ಎಂದು ಸೂಚಿಸಿದರು.

ಸರಕುಗಳ ಲೋಡಿಂಗ್ ಮತ್ತು ಅನ್‌ಲೋಡಿಂಗ್ ವ್ಯವಸ್ಥೆಯನ್ನು ನಗರ ವಿನ್ಯಾಸ ತಜ್ಞರ ಸಹಕಾರದೊಂದಿಗೆ ವೈಜ್ಞಾನಿಕವಾಗಿ ರೂಪಿಸುವಂತೆ ಮಹೇಶ್ವರ್ ರಾವ್ ನಿರ್ದೇಶನ ನೀಡಿದರು.

ಪಾರ್ಕಿಂಗ್ ಎಂಟ್ರಿ–2 ಹಾಗೂ ಹೂ ಮಾರುಕಟ್ಟೆ ಪ್ರದೇಶದಲ್ಲಿ ಸಾರ್ವಜನಿಕ ಶೌಚಾಲಯ ನಿರ್ಮಿಸಿ ಸಮರ್ಪಕ ನಿರ್ವಹಣೆ ಮಾಡುವಂತೆ ಸೂಚಿಸಿದರು. ಮಾರುಕಟ್ಟೆ ಅಭಿವೃದ್ಧಿ ಕಾಮಗಾರಿಗಳ ಮೇಲ್ವಿಚಾರಣೆಗೆ ಎಇಇ ಅಥವಾ ಸಮಾನ ಹುದ್ದೆಯ ಅಧಿಕಾರಿಯನ್ನು ವಿಶೇಷವಾಗಿ ನಿಯೋಜಿಸಿ, ಬಾಕಿ ಕಾಮಗಾರಿಗಳನ್ನು ತ್ವರಿತವಾಗಿ ಪೂರ್ಣಗೊಳಿಸುವಂತೆ ಸೂಚಿಸಿದರು.

ಸ್ಥಳ ಪರಿಶೀಲನೆ ವೇಳೆ ಕೇಂದ್ರ ನಗರ ಪಾಲಿಕೆ ಆಯುಕ್ತ ಜಿ. ಜಗದೀಶ್, ಅಪರ ಆಯುಕ್ತ ವೆಂಕಟಚಲಪತಿ, ಮುಖ್ಯ ಅಭಿಯಂತರ ವಿಜಯ್ ಕುಮಾರ್ ಹರಿದಾಸ್ ಸೇರಿದಂತೆ ಅಧಿಕಾರಿಗಳು ಉಪಸ್ಥಿತರಿದ್ದರು.

# ಕೆಎಸ್‌ಸಿಎ ಅಂಡರ್–19 ಇಂಟರ್ ಝೋನಲ್ ಟಿ–20ಗೆ ವಿಜಯಪುರದ ತನೂಶ್ರೀ ಇಜೇರಿ ಆಯ್ಕೆ



**ವಿಜಯಪುರ, ಆ. 5:** ವಿಜಯಪುರದ ಪ್ರತಿಭಾವಂತ ಯುವ ಕ್ರಿಕೆಟಿಗರಾದ ತನೂಶ್ರೀ ಇಜೇರಿ ಅವರು 2026–27ನೇ ಸಾಲಿನ ಕೆಎಸ್‌ಸಿಎ ಅಂಡರ್–19 ಮಹಿಳಾ ಇಂಟರ್ ರೆಝೋನಲ್ ಟಿ–20 ಪಂದ್ಯಾವಳಿಯ ಕಂಬೈನ್ಡ್ ಮೊಫಸ್ಸಿಲ್ ಫಿಖ ತಂಡಕ್ಕೆ ಆಯ್ಕೆಯಾಗಿದ್ದಾರೆ. ಪಂದ್ಯಾವಳಿಯು ಆಗಸ್ಟ್ 6ರಿಂದ 12ರವರೆಗೆ ಬೆಂಗಳೂರಿನಲ್ಲಿ ನಡೆಯಲಿದೆ.

ಇತ್ತೀಚೆಗೆ ಬೆಂಗಳೂರಿನಲ್ಲಿ ನಡೆದ ಕೆಎಸ್‌ಸಿಎ ಮಹಿಳಾ ಇಂಟರ್ ಮೊಫಸ್ಸಿಲ್ ಪಂದ್ಯಾವಳಿಯಲ್ಲಿ ರಾಯಚೂರು ವಲಯ ಮಹಿಳಾ ತಂಡವನ್ನು ಪ್ರತಿನಿಧಿಸಿದ ತನೂಶ್ರೀ ಅವರು ಆಲ್‌ರೌಂಡ್ ಪ್ರದರ್ಶನ ನೀಡಿ ಆಯ್ಕೆ ಸಮಿತಿಯ ಗಮನ ಸೆಳೆದಿದ್ದಾರೆ.

ಎಡಗೈ ಆರಂಭಿಕ ಬ್ಯಾಟರ್ ಹಾಗೂ ಎಡಗೈ ಆರ್ಥಡಾಕ್ಸ್ ಸ್ಪಿನ್ನರ್ ಆಗಿರುವ ಅವರು ಐದು ಪಂದ್ಯಗಳಲ್ಲಿ 172 ರನ್ ಗಳಿಸಿದ್ದು, ಧಾರವಾಡ ವಲಯದ ವಿರುದ್ಧ ಅಜೇಯ 56 ರನ್ ಹಾಗೂ ಶಿವಮೊಗ್ಗ ವಲಯದ ವಿರುದ್ಧ 57 ರನ್ ಸಿಡಿಸಿ ಮಿಂಚಿದ್ದಾರೆ. ಬೌಲಿಂಗ್‌ನಲ್ಲಿಯೂ 5 ವಿಕೆಟ್ ಪಡೆದು ತಂಡದ ಯಶಸ್ಸಿಗೆ ಪ್ರಮುಖ ಕೊಡುಗೆ ನೀಡಿದ್ದಾರೆ.

ಬ್ಯಾಟಿಂಗ್ ಮತ್ತು ಬೌಲಿಂಗ್ ಎರಡರಲ್ಲಿಯೂ ಸ್ಥಿರ ಪ್ರದರ್ಶನ ನೀಡಿದ ಪರಿಣಾಮ ತನೂಶ್ರೀ ಅವರಿಗೆ ಪ್ರತಿಷ್ಠಿತ ಕಂಬೈನ್ಡ್ ಮೊಫಸ್ಸಿಲ್ ಫಿಖ ತಂಡದಲ್ಲಿ ಸ್ಥಾನ ದೊರೆತಿದೆ.

ಈ ಸಾಧನೆಗೆ ರಾಯಚೂರು ವಲಯ ಮಹಿಳಾ ಕ್ರಿಕೆಟ್ ತಂಡದ ಆಡಳಿತ ಮಂಡಳಿ, ಬಿಜಾಪುರ ಮಹಿಳಾ ಕ್ರಿಕೆಟ್ ಕ್ಲಬ್, ತರಬೇತುದಾರರು ಹಾಗೂ ಆಟಗಾರರು ಅಭಿನಂದನೆ ಸಲ್ಲಿಸಿದ್ದು, ಮುಂಬರುವ ಪಂದ್ಯಾವಳಿಯಲ್ಲಿ ಉತ್ತಮ ಪ್ರದರ್ಶನ ನೀಡಿ ವಿಜಯಪುರ ಹಾಗೂ ಕರ್ನಾಟಕಕ್ಕೆ ಕೀರ್ತಿ ತರಲೆಂದು ಶುಭ ಹಾರೈಸಿದ್ದಾರೆ.

# ಎಲ್‌ಇಡಿ ಬೀದಿ ದೀಪ ಯೋಜನೆ ಪೂರ್ಣಗೊಳಿಸಲು 2 ತಿಂಗಳ ಗಡುವು: ಕೃಷ್ಣ ಬೈರೇಗೌಡ

**ಬೆಂಗಳೂರು, ಆ.5:** ನಗರದಾದ್ಯಂತ ಎಲ್‌ಇಡಿ ಬೀದಿ ದೀಪ ಯೋಜನೆ ಸಂಪೂರ್ಣವಾಗಿ ಅನುಷ್ಠಾನಗೊಂಡರೆ ಶೇ.61.01ರಷ್ಟು ವಿದ್ಯುತ್ ಉಳಿತಾಯ ಸಾಧ್ಯವಿದೆ. ಆದರೆ ಯೋಜನೆಯ ಅನುಷ್ಠಾನ ವಿಳಂಬವಾಗುತ್ತಿರುವುದಕ್ಕೆ ಅಧಿಕಾರಿಗಳ ವಿರುದ್ಧ ಸಚಿವ ಕೃಷ್ಣ ಬೈರೇಗೌಡ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ನಗರದಲ್ಲಿ ಎಲ್‌ಇಡಿ ಬೀದಿ ದೀಪ ಅಳವಡಿಕೆ ಕುರಿತು ನಡೆದ ಜಿಬಿಎ ವಿದ್ಯುತ್ ಎಂಜಿನಿಯರ್‌ಗಳ ಸಭೆಯಲ್ಲಿ ಮಾತನಾಡಿದ ಅವರು, 2025ರ ಮೇ 7 ಮತ್ತು 15ರಂದು ಕಾರ್ಯಾದೇಶ ನೀಡಿದ್ದರೂ ಯೋಜನೆ ನಿರೀಕ್ಷಿತ ವೇಗದಲ್ಲಿ ಸಾಗಿಲ್ಲ ಎಂದು ಪ್ರಶ್ನಿಸಿದರು. ನಗರದಾದ್ಯಂತ ಒಟ್ಟು 3,02,919 ಎಲ್‌ಇಡಿ ದೀಪಗಳನ್ನು ಅಳವಡಿಸಬೇಕಿದ್ದು, ಈವರೆಗೆ 2,67,270 ದೀಪಗಳು ಮಾತ್ರ ಅಳವಡಿಸಲಾಗಿದೆ.

ಇದೇ ರೀತಿ 24,677 ಸಿಸಿಎಂಎಸ್ ಪ್ಯಾನಲ್‌ಗಳ ಪೈಕಿ ಕೇವಲ 7,567 ಪ್ಯಾನಲ್‌ಗಳು ಅಳವಡಿಕೆಯಾಗಿವೆ. ಬಾಕಿ ಕಾಮಗಾರಿಯನ್ನು ತ್ವರಿತವಾಗಿ ಪೂರ್ಣಗೊಳಿಸಲು ಆಗಸ್ಟ್ 3ರಿಂದ ಎರಡು ತಿಂಗಳ ಹೆಚ್ಚುವರಿ ಕಾಲಾವಕಾಶ ನೀಡಲಾಗಿದೆ.

ಸಾಂಪ್ರದಾಯಿಕ ಬೀದಿ ದೀಪಗಳನ್ನು ತೆರವುಗೊಳಿಸಿ ಎಲ್‌ಇಡಿ ದೀಪಗಳನ್ನು ಅಳವಡಿಸುವುದರ ಜೊತೆಗೆ, ದೀಪಗಳೇ ಇಲ್ಲದ ಪ್ರದೇಶಗಳಲ್ಲಿ ಹೊಸ ದೀಪಗಳನ್ನು ಅಳವಡಿಸಬೇಕು.ಬೀದಿ ದೀಪಗಳ ಕಾರ್ಯನಿರ್ವಹಣೆಯನ್ನು ಸ್ವಯಂಚಾಲಿತವಾಗಿ ಮೇಲ್ವಿಚಾರಣೆ ಮಾಡಲು ಸಿಸಿಎಂಎಸ್ ವ್ಯವಸ್ಥೆಯನ್ನೂ ಕಡ್ಡಾಯವಾಗಿ ಅಳವಡಿಸಬೇಕು ಎಂದು ಸಚಿವರು ಸೂಚಿಸಿದರು.

48 ಗಂಟೆಯೊಳಗೆ ದೂರು ಪರಿಹರಿಸಲು ಸೂಚನೆ

‘ಸಹಾಯ’ ಪೋರ್ಟಲ್‌ನಲ್ಲಿ ದಾಖಲಾಗುತ್ತಿರುವ ದೂರುಗಳ ಪೈಕಿ ಶೇ.34ರಷ್ಟು ದೂರುಗಳು ಬೀದಿ ದೀಪಗಳು ಕಾರ್ಯನಿರ್ವಹಿಸದಿರುವುದಕ್ಕೆ ಸಂಬಂಧಿಸಿವೆ. ಇಂತಹ ದೂರುಗಳನ್ನು ಗರಿಷ್ಠ 48 ಗಂಟೆಯೊಳಗೆ ಪರಿಹರಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಲಾಯಿತು.ನಿಗದಿತ ಅವಧಿಯಲ್ಲಿ ಸಮಸ್ಯೆ ಬಗೆಹರಿಸದ ಗುತ್ತಿಗೆದಾರರಿಗೆ ದಂಡ ವಿಧಿಸಬೇಕು. ದೀಪಗಳ ಸಂಖ್ಯೆ ಹಾಗೂ ದೂರು ಪರಿಹಾರಕ್ಕೆ ವಿಳಂಬವಾದ ದಿನಗಳ ಆಧಾರದ ಮೇಲೆ ದಂಡದ ಮೊತ್ತ ನಿಗದಿಪಡಿಸಿ, ನಿರ್ಲಕ್ಷ್ಯ ತೋರುವ ಗುತ್ತಿಗೆದಾರರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಬೈರೇಗೌಡ ನಿರ್ದೇಶಿಸಿದರು.

‘ಬೇಸಿಕ್ ಡೇಟಾ ಇಲ್ಲದೆ ಸಭೆಗೆ ಏಕೆ ಬರಬೇಕು?’



ಸಭೆಗೆ ಸೂಕ್ತ ಅಂಕಿಅಂಶಗಳೊಂದಿಗೆ ಬಾರದ ಅಧಿಕಾರಿಗಳ ವಿರುದ್ಧ ಸಚಿವರು ತೀವ್ರ ಅಸಮಾಧಾನ ವ್ಯಕ್ತಪಡಿಸಿದರು. ನಗರದ ಐದೂ ಪಾಲಿಕೆಗಳಲ್ಲಿ ಬೀದಿ ದೀಪಗಳಿಗೆ ಪ್ರಸ್ತುತ ಪಾವತಿಸುತ್ತಿರುವ ವಿದ್ಯುತ್ ಬಿಲ್ ಎಷ್ಟು ಹಾಗೂ ಎಲ್‌ಇಡಿ ದೀಪ ಅಳವಡಿಸಿದ ಬಳಿಕ ಎಷ್ಟು ಉಳಿತಾಯವಾಗಲಿದೆ ಎಂಬ ಮಾಹಿತಿ ನೀಡುವಂತೆ ಕೇಳಿದಾಗ ಅಧಿಕಾರಿಗಳ ಬಳಿ ಅಧಿಕೃತ ಅಂಕಿಅಂಶಗಳೇ ಇರಲಿಲ್ಲ.

“ಬೇಸಿಕ್ ಡೇಟಾ ಇಲ್ಲ, ಪ್ರಶ್ನೆಗೆ ಉತ್ತರ ಇಲ್ಲ. ಸಭೆ ಕರೆದಾಗ ಕನಿಷ್ಠ ಸಿದ್ಧತೆಯೂ ಇಲ್ಲದೆ ಬರುವುದೇಕೆ? ಸರ್ಕಾರಿ ಕೆಲಸ ಅಂದರೆ ಕೈಬೀಸಿಕೊಂಡು ಬಂದು ಹೋಗಬಹುದು ಎಂಬ ಧೋರಣೆ ಬೆಳೆದಿದೆ. ಅಧಿಕಾರಿಗಳ ಇಂತಹ ವರ್ತನೆಯಿಂದ ಸರ್ಕಾರಕ್ಕೆ ಕೆಟ್ಟ ಹೆಸರು ಬರುತ್ತದೆ,” ಎಂದು ಸಚಿವರು ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರು.

ಸಭೆಯಲ್ಲಿ ಮುಖ್ಯ ಆಯುಕ್ತ ಮಹೇಶ್ವರ ರಾವ್, ನಗರ ಪಾಲಿಕೆ ಆಯುಕ್ತರಾದ ಕೆ.ಎನ್. ರಮೇಶ್, ಡಾ. ರಾಜೇಂದ್ರ ಕೆ.ವಿ., ಮುಖ್ಯ ಎಂಜಿನಿಯರ್‌ಗಳಾದ ಆನಂದ್, ಸ್ವಯಂಪ್ರಭಾ ಸೇರಿದಂತೆ ವಿದ್ಯುತ್ ವಿಭಾಗದ ಅಧಿಕಾರಿಗಳು ಉಪಸ್ಥಿತರಿದ್ದರು.

# ಮಳೆಗಾಲದಲ್ಲಿ ಶುದ್ಧ ಕುಡಿಯುವ ನೀರು ಪೂರೈಕೆಗೆ ಆದ್ಯತೆ ನೀಡಿ: ಶಾಸಕ ಚನ್ನಾರೆಡ್ಡಿ ಪಾಟೀಲ್

**ಯಾದಗಿರಿ:** ಮಳೆಗಾಲದ ಹಿನ್ನೆಲೆಯಲ್ಲಿ ನಗರ ಹಾಗೂ ಗ್ರಾಮೀಣ ಭಾಗಗಳಲ್ಲಿ ಯಾವುದೇ ರೀತಿಯ ಕುಡಿಯುವ ನೀರಿನ ಸಮಸ್ಯೆ ಉಂಟಾಗದಂತೆ ಮುನ್ನೆಚ್ಚರಿಕೆ ಕ್ರಮ ಕೈಗೊಂಡು ಶುದ್ಧ ಕುಡಿಯುವ ನೀರನ್ನು ನಿರಂತರವಾಗಿ ಪೂರೈಸಬೇಕು ಎಂದು ಶಾಸಕ ಚನ್ನಾರೆಡ್ಡಿ ಪಾಟೀಲ್ ತುನ್ನೂರ ಸಂಬಂಧಿತ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಶಾಸಕರ ಜನಸಂಪರ್ಕ ಕಚೇರಿಯಲ್ಲಿ ಮಂಗಳವಾರ ನಡೆದ ತಾಲೂಕು ಟಾಸ್ಕ್ ಫೋರ್ಸ್ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಯಾದಗಿರಿ, ಶಹಾಪುರ ಹಾಗೂ ವಡಗೇರಾ ತಾಲೂಕುಗಳ ವ್ಯಾಪ್ತಿಯ ಗ್ರಾಮಗಳು ಮತ್ತು ತಾಂಡಾಗಳಲ್ಲಿ ಕುಡಿಯುವ ನೀರಿನ ಲಭ್ಯತೆ ಕುರಿತು ಸಮಗ್ರ ಪರಿಶೀಲನೆ ನಡೆಸಬೇಕು ಎಂದು ಹೇಳಿದರು.

ಕೆಟ್ಟು ನಿಂತಿರುವ ಬೋರ್‌ವೆಲ್‌ಗಳನ್ನು ತ್ವರಿತವಾಗಿ ದುರಸ್ತಿಗೊಳಿಸುವುದು, ಅಗತ್ಯವಿದ್ದಲ್ಲಿ ಹೊಸ ಕೊಳವೆಬಾವಿಗಳನ್ನು ಕೊರೆಸುವುದು, ದುರಸ್ತಿಗೆ ಒಳಪಟ್ಟಿರುವ ಆರ್‌ಓ ಘಟಕಗಳನ್ನು ಕಾರ್ಯಾರಂಭಗೊಳಿಸುವುದು ಹಾಗೂ ಅವಶ್ಯಕತೆ ಎದುರಾದರೆ ಖಾಸಗಿ ಬೋರ್‌ವೆಲ್‌ಗಳಿಂದಲೂ ನೀರು ಪೂರೈಸುವ ವ್ಯವಸ್ಥೆ ಮಾಡಬೇಕು ಎಂದು ನಿರ್ದೇಶನ ನೀಡಿದರು.

ಕುಡಿಯುವ ನೀರಿನ ಸಮಸ್ಯೆ ಪರಿಹಾರಕ್ಕಾಗಿ ಸರ್ಕಾರದಿಂದ ?1 ಕೋಟಿ ಅನುದಾನ ಬಿಡುಗಡೆಯಾಗಿದ್ದು, ಕೈಗೊಳ್ಳಬೇಕಾದ ಕಾಮಗಾರಿಗಳ ಅಂದಾಜು ವೆಚ್ಚವನ್ನು ತಕ್ಷಣ ಸಿದ್ಧಪಡಿಸಿ ಸಲ್ಲಿಸಿದರೆ ಅಗತ್ಯ ಅನುದಾನ ಬಿಡುಗಡೆ ಮಾಡಲಾಗುವುದು ಎಂದು ತಿಳಿಸಿದರು.

ಮಳೆಗಾಲದಲ್ಲಿ ಸಾಂಕ್ರಾಮಿಕ ರೋಗಗಳು ಹರಡುವ ಸಾಧ್ಯತೆ ಹೆಚ್ಚಿರುವುದರಿಂದ ಗ್ರಾಮ ಪಂಚಾಯಿತಿಗಳು ಸ್ವಚ್ಛತೆಗೆ ಆದ್ಯತೆ ನೀಡಬೇಕು. ಚರಂಡಿಗಳನ್ನು ನಿಯಮಿತವಾಗಿ ಸ್ವಚ್ಛಗೊಳಿಸಿ, ಸೊಳ್ಳೆಗಳ ಹಾವಳಿ ನಿಯಂತ್ರಣಕ್ಕೆ ಅಗತ್ಯ ಕ್ರಮ ಕೈಗೊಳ್ಳುವಂತೆ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳ ಮೂಲಕ ಎಲ್ಲ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಸೂಚನೆ ನೀಡಬೇಕು ಎಂದು ಹೇಳಿದರು.



ನಗರದ 31 ವಾರ್ಡ್ಗಳಲ್ಲೂ ಶುದ್ಧ ಕುಡಿಯುವ ನೀರಿನ ಪೂರೈಕೆ ಸಮರ್ಪಕವಾಗಿರುವಂತೆ ನಗರಸಭೆ ಹಾಗೂ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು. ಮಳೆಯಿಂದ ರಸ್ತೆಗಳಲ್ಲಿ ಉಂಟಾಗಿರುವ ಗುಂಡಿಗಳನ್ನು ತಕ್ಷಣ ಮುಚ್ಚಿ, ಮಳೆ ನೀರು ನಿಲ್ಲದಂತೆ ಚರಂಡಿಗಳ ನಿರ್ವಹಣೆಗೆ ವಿಶೇಷ ಗಮನ ಹರಿಸಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಸಭೆಯಲ್ಲಿ ಕೃಷಿ ಇಲಾಖೆ ಜಂಟಿ ನಿರ್ದೇಶಕ ರತೇಂದ್ರನಾಥ ಸೂಗುರ, ಯಾದಗಿರಿ ತಹಸೀಲ್ದಾರ್ ಸುರೇಶ್ ಅಂಕಲಗಿ, ವಡಗೇರಾ ತಹಸೀಲ್ದಾರ್ ಮಂಗಳಾ, ಶಹಾಪುರ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಬಸವರಾಜ ಶರಬೈ, ಯಾದಗಿರಿ ತಾಪಂ ಇಒ ಮಹಾದೇವ, ವಡಗೇರಾ ತಾಪಂ ಅಧಿಕಾರಿ ಶಶಿಧರ ಹಿರೇಮಠ, ಜೆಸ್ಕಾಂ ಎಇಇ ಮಾರ್ಕಂಡೇಶ್ವರ, ನಗರಸಭೆ ಪೌರಾಯುಕ್ತ ಉಮೇಶ್ ಚವ್ಹಾಣ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಕೋಳಿ ಎಸೆದು ಹರಕೆ ತೀರಿಸಿದ ಭಕ್ತರು

**ಚಿತ್ತಾಪುರ;** ಸಾವಿರಾರು ಜನಸಾಗರದ ಮಧ್ಯೆ ಪಟ್ಟಣದ ಮರಗಮ್ಮ ದೇವಿಯ ಜಾತ್ರಾ ಮಹೋತ್ಸವವು ಮಂಗಳವಾರ ಸಂಜೆ ಬಹಳ ಅದ್ದೂರಿಯಾಗಿ ಜರುಗಿತು.

ಜಾತ್ರೆಯಲ್ಲಿ ಎಲ್ಲ ಜಾತಿ ಜನಾಂಗದವರು ಭಕ್ತಿಯಿಂದ ಭಾಗವಹಿಸಿ ದೇವಿಯ ಗೊಂಬೆಗಳ ಮೇಲೆ ಕೋಳಿ ಎಸೆಯುವ ಮೂಲಕ ತಮ್ಮ ಹರಕೆ ಅರ್ಪಿಸಿ ಪುನೀತರಾದರು.

ಮಂಗಳವಾರ ಸಾಯಂಕಾಲ 6 ಘಂಟೆಗೆ ಮರಗಮ್ಮ ದೇವಿಯ ಗೊಂಬೆಗಳ ಮೆರವಣಿಗೆ ಪ್ರಾರಂಭವಾಗುತ್ತಿದ್ದಂತೆ ಸಾವಿರಾರು ಸಂಖ್ಯೆಯಲ್ಲಿ ಜನ ಸೇರುತ್ತಾರೆ, ತಮ್ಮ ಮನದಾಳದ ಬೇಡಿಕೆಗಳನ್ನು ಈಡೇರಿಕೆಗಾಗಿ ಇಲ್ಲಿಯ ಭಕ್ತರು ಕೋಳಿ ಕೊಡುವ ಹರಕೆ ಮಾಡಿಕೊಳ್ಳುತ್ತಾರೆ.

ಗೊಂಬೆಗಳ ಮೇಲೆ ಕೋಳಿ ಎಸೆದಾಗ ಅದನ್ನು ಹಿಡಿಯಲು ನಾ ಮುಂದು ತಾ ಮುಂದು ಮುಗಿ ಬಿಳುತ್ತಾರೆ. ಒಬ್ಬರ ಕೈಗೆ ಸಿಕ್ಕರೆ ಕೋಳಿ ಉಳಿದಿತ್ತು. ಅದೇ ಕೋಳಿ ಇಬ್ಬರ ಅಥವಾ ಮೂವರ ನಡುವೆ ಸಿಕ್ಕಾಗ ಕೋಳಿಯ ದೇಹ ಚಿದ್ರ ಚಿದ್ರವಾಗುತ್ತದೆ. ಈ ದೃಶ್ಯ ನೋಡುಗರಿಗೆ ನೋವನ್ನು ಉಂಟುಮಾಡುತ್ತದೆ. ಭಕ್ತಾದಿಗಳು ಹರಕೆ ತೀರಿಸಿ ದೇವಿಯ ದರ್ಶನ ಪಡೆದು ಧನ್ಯರಾಗುತ್ತಾರೆ.

ಪಟ್ಟಣದ ಹೋಳಿಕಟ್ಟಾದ ದೇಶಮುಖ ಹಾಗೂ ರೇಷ್ಮೆ ಮನೆಯಿಂದ ದೇವಿಯ ಗೊಂಬೆಗಳಿಗೆ ಬಟ್ಟೆ ತರುವುದು, ಮುಕುಂದ ಬಡಿಗೇರ ಮನೆಯಲ್ಲಿ ಧಾರ್ಮಿಕ ವಿಧಿ ವಿಧಾನಗಳ ಮೂಲಕ ಗೊಂಬೆಗಳ ಪೂಜೆ ಕಾರ್ಯ ನೆರವೇರಿತ್ತು. ಇಲ್ಲಿ ಮಹಿಳೆಯರು, ಸಾರ್ವಜನಿಕರು ಪೂಜೆ ಸಲ್ಲಿಸುತ್ತಾರೆ. ನಂತರ ಮನೆಯಿಂದ ಪ್ರಾರಂಭವಾದ ಮೆರವಣಿಗೆ ಹನುಮಾನ ಮಂದಿರ ರಸ್ತೆ, ಶಿಶು ವಿಹಾರ ಶಾಲೆಯ ರಸ್ತೆ ಮೂಲಕ ದೇವಸ್ಥಾನಕ್ಕೆ ತಲುಪಿತು. ಮೆರವಣಿಗೆ ಉದ್ದಕ್ಕೂ ಭಕ್ತರು ನೂರಾರು ಕೋಳಿಗಳು ಎಸೆಯುವುದೇ ನೋಡುಗರ ಕಣ್ಮನ ಸೆಳೆಯುತ್ತದೆ. ಮೆರವಣಿಗೆಯಲ್ಲಿ ಜನಪ್ರತಿನಿಧಿಗಳು, ಮಹಿಳೆಯರು, ರಾಜಕೀಯ ಮುಖಂಡರು, ಅಧಿಕಾರಿಗಳು, ಯುವಕರು ಹೀಗೆ ಎಲ್ಲರು ಶದ್ಧಾ ಭಕ್ತಿ ಭಾವನೆಯಿಂದ ಭಾಗಹಿಸುತ್ತಾರೆ.



ಮೆರವಣಿಗೆಯಲ್ಲಿ ಸಹಸ್ರ ಸಂಖ್ಯೆಯಲ್ಲಿ ಜನ ಭಾಗವಹಿಸಿದ್ದರೂ ಸಹ ಯಾವುದೇ ಜಗಳ, ಅನಾಹುತಗಳು ಆಗದೆ ಇರುವುದು ಮತ್ತೊಂದು ವಿಶೇಷ, ಪಟ್ಟಣದಲ್ಲಿ ಮರಗಮ್ಮ ದೇವಿ ಜಾತ್ರೆಗೆ ಸೇರುವಷ್ಟು ಜನ ಮತೇ ಯಾವುದೇ ಜಾತ್ರೆಗೆ ಅಷ್ಟು ಜನ ಸೇರುವುದಿಲ್ಲ ಎಂಬ ಅಭಿಪ್ರಾಯ ಇಲ್ಲಿಯ ಸಾರ್ವಜನಿಕರದ್ದಾಗಿದೆ.

ಡಿವೈಎಸ್ಪಿ ಶಂಕರಗೌಡ ನೇತೃತ್ವದಲ್ಲಿ ಪಿಎಸ್‌ಐ ಮಂಜುನಾಥ ರೆಡ್ಡಿ ಅವರು ಸೂಕ್ತ ಪೊಲೀಸ್ ಬಂದೋಬಸ್ತ್ ಒದಗಿಸಿದ್ದರು.

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE